ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 20

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಗುರುವಾರ: 25-12-2025

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626

# ದ್ವೇಷ ಭಾಷಣ ಕಾಯ್ದೆ ಅಂಗೀಕರಿಸದಂತೆ ಗೌರ್ನರ್‌ಗೆ ಬಿಜೆಪಿ ದೂರು

**ಬೆಂಗಳೂರು,ಡಿ.24–** ಪ್ರತಿಪಕ್ಷಗಳ ತೀವ್ರ ವಿರೋಧದ ನಡುವೆಯೂ ವಿಧಾನಮಂಡಲದ ಉಭಯ ಸದನಗಳಲ್ಲಿ ಅಂಗೀಕಾರವಾಗಿರುವ ವಿವಾದಾತಕ ಅಪರಾಧಗಳ ಪ್ರತಿಬಂಧಕ ವಿಧೇಯಕ-2025 ಅನ್ನು ಯಾವುದೇ ಕಾರಣಕ್ಕೂ ಅಂಗೀಕರಿಸದಂತೆ ಆಗ್ರಹಿಸಿ ಬಿಜೆಪಿ ನಾಳೆ ರಾಜ್ಯಪಾಲರಿಗೆ ದೂರು ನೀಡಲಿದೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ವಿಧಾನ ಸಭೆಯ ಪ್ರತಿಪಕ್ಷದ ನಾಯಕ ಆರ್. ಅಶೋಕ್, ವಿಧಾನಪರಿಷತ್ ಪ್ರತಿ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಶಾಸಕರು, ವಿಧಾನಪರಿಷತ್ ಸದಸ್ಯರು ಹಾಗೂ ಪಕ್ಷದ ಪ್ರಮುಖರು ಲೋಕಭವನ( ರಾಜಭವನ)ಕ್ಕೆ ತೆರಳಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರಿಗೆ ದೂರು ನೀಡಲಿದೆ.

ವ್ಯಕ್ತಿ ಸ್ವಾತಂತ್ರ್ಯಕ್ಕೆ ಧಕ್ಕೆ ತರಲು ಹಾಗೂ ಜೈಲಿಗೆ ಕಳುಹಿಸುವ ಕೆಲಸಕ್ಕಾಗಿ ಈ ಕಾಯ್ದೆ ಜಾರಿಗೆ ತರಲು ಸರ್ಕಾರ ಹೊರಟಿದೆ. ಇದರ ಕುರಿತು ರಾಷ್ಟ್ರಪತಿ ಗಮನ ಸೆಳೆಯಲಿದ್ದೇವೆ. ನ್ಯಾಯಾಂಗದ ಅಧಿಕಾರ ಉಲ್ಲಂಘಿಸಿ ಡಿವೈಎಸ್ಪಿ ಮೇಲ್ಪಟ್ಟ ಅಧಿಕಾರಿಗಳೂ ಸೇರಿದಂತೆ ಯಾರನ್ನಾಬೇಕಾದರು ಏಕಾಏಕಿ ಜೈಲಿಗೆ ಹಾಕುವ ಕಾನೂನು ತಂದಿದ್ದಾರೆ. ಈ ಮೂಲಕ ಮತ್ತೊಮೆ ಅಘೋಷಿತ ತುರ್ತು ಪರಿಸ್ಥಿತಿ ಜಾರಿಗೊಳಿಸುತ್ತಿದ್ದಾರೆ ಎಂಬುದು ಬಿಜೆಪಿ ಆರೋಪವಾಗಿದೆ.

ಈ ವಿಧೇಯಕವು ಅಭಿವ್ಯಕ್ತಿ ಸ್ವಾತಂತ್ರ್ಯಕ್ಕೆ ಮಾರಕ ಹಾಗೂ ವಿಪಕ್ಷಗಳ ವಿರುದ್ಧ ದುರ್ಬಳಕೆ ಆಗುವ ಸಾಧ್ಯತೆ ಇದೆ. ಯಾವುದೇ ಕಾರಣಕ್ಕೂ ಈ ವಿಧೇಯಕವನ್ನು ಅಂಗೀಕರಿಸಬಾರದು ಎಂದು ಮನವಿ ಪತ್ರದ ಮೂಲಕ ಒತ್ತಾಯಿಸಲಿದೆ.

ಏನಿದು ದ್ವೇಷ ಭಾಷಣ ಮಸೂದೆ



ದ್ವೇಷ ಭಾಷಣ ಪ್ರಸರಣೆ, ಪ್ರಕಟಣೆ, ಪ್ರಚಾರ ತಡೆಯುವ ವಿಧೇಯಕ ಇದಾಗಿದ್ದು, ಯಾವುದೇ ಪೂರ್ವಾಗ್ರಹ ಪೀಡಿತ ಹಿತಾಸಕ್ತಿಯನ್ನು ಪೂರೈಸಲು, ಜೀವಂತ ಅಥವಾ ಸತ್ತ ವ್ಯಕ್ತಿ, ಇಲ್ಲವೇ ವ್ಯಕ್ತಿಗಳ ಗುಂಪಿನ ವಿರುದ್ಧ ದ್ವೇಷ ಅಥವಾ ದ್ವೇಷದ ಭಾವನೆಗಳನ್ನು ಉಂಟುಮಾಡುವ ಉದ್ದೇಶದಿಂದ ಮಾಡಿದ ಭಾಷಣ, ಪ್ರಕಟಿಸಿದ ಅಥವಾ ಪ್ರಸಾರ ಮಾಡಿದ ಯಾವುದೇ ಅಭಿವ್ಯಕ್ತಿ ಹಾಗೂ ಧರ್ಮ, ಜನಾಂಗ, ಜಾತಿ ಅಥವಾ ಸಮುದಾಯ, ಲಿಂಗ, ಲೈಂಗಿಕ ದೃಷ್ಟಿಕೋನ, ಜನಸ್ಥಳ, ವಾಸಸ್ಥಳ, ಭಾಷೆ, ಅಂಗವೈಕಲ್ಯ ಅಥವಾ ಬುಡಕಟ್ಟು ಆಧಾರದ ಮೇಲೆ ಯಾವುದೇ ಪಕ್ಷಪಾತವನ್ನು ದ್ವೇಷ ಭಾಷಣ ಎಂದು ವರ್ಗೀಕರಿಸಲಾಗಿದೆ.

ಮೊದಲ ಬಾರಿಗೆ ದ್ವೇಷ ಭಾಷಣ, ದ್ವೇಷ ಅಪರಾಧಗಳಿಗೆ ಕನಿಷ್ಠ 1 ವರ್ಷ ಮತ್ತು ಗರಿಷ್ಠ 7 ವರ್ಷದವರೆಗೆ ಜೈಲುವಾಸ ಹಾಗೂ 50 ಸಾವಿರ ರೂ. ದಂಡ ವಿಧಿಸಲು ಅವಕಾಶ ನೀಡಲಾಗಿದೆ. ಅಪರಾಧ ಪುನರಾವರ್ತನೆ ಆದರೆ ಕನಿಷ್ಠ 2 ವರ್ಷದಿಂದ ಗರಿಷ್ಠ 10 ವರ್ಷದ ವರೆಗೆ ಜೈಲು ಶಿಕ್ಷೆ ಹಾಗೂ 1 ಲಕ್ಷ ರೂ. ದಂಡ ವಿಧಿಸಬಹುದಾಗಿದೆ. ದ್ವೇಷ ಭಾಷಣ ಮಾಡಿ ಪ್ರಕರಣ ದಾಖಲಾದರೆ ಅದು ಜಾಮೀನು ರಹಿತ ಪ್ರಕರಣವಾಗಿದ್ದು, ಪ್ರಥಮ ದರ್ಜೆ ನ್ಯಾಯಿಕ ಮ್ಯಾಜಿಸ್ಟೇಟರ್ ಮೂಲಕ ದ್ವೇಷ ಭಾಷಣಗಳ ವಿಚಾರಣೆ ಮಾಡಬೇಕು. ದ್ವೇಷ ಭಾಷಣಗಳ ಪ್ರಕರಣಗಳನ್ನು ಕಾರ್ಯ ನಿರ್ವಾಹಕ ಮ್ಯಾಜಿಸ್ಟ್ರೇಟ್ ಅಥವಾ ಉಪ ಪೊಲೀಸ್ ವರಿಷ್ಠಾಧಿಕಾರಿ ದರ್ಜೆಗಿಂತ ಕಡಿಮೆ ಇಲ್ಲದ ಯಾರೇ ಪೊಲೀಸ್ ಅಧಿಕಾರಿಯು ಮಾಹಿತಿ ಸ್ವಿಕರಿಸಿದರೆ ವಿಚಾರಣೆ ಮಾಡಿ ಕಾಯ್ದೆಯಡಿ ಕ್ರಮ ಕೈಗೊಳ್ಳಲು ಅವಕಾಶ ನೀಡಲಾಗಿದೆ.

ಕರಾವಳಿ ಸೇರಿದಂತೆ ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಮತೀಯ ಕಲಹಗಳಿಗೆ ದ್ವೇಷ ಭಾಷಣ ಪ್ರಮುಖ ಕಾರಣವಾಗಿದೆ. ಮತೀಯವಾದಿ ಸಂಘಟನೆಗಳ ಸಮಾವೇಶಗಳಲ್ಲಿ ದ್ವೇಷ ಭಾಷಣ ಮಾಡುವ ಮೂಲಕ ಜನರನ್ನು ಪ್ರಚೋದನೆ ಮಾಡುವ ಕೆಲಸವಾಗುತ್ತಿದೆ. ಈ ಹಿನ್ನೆಲೆಯಲ್ಲಿ ಇದಕ್ಕೆ ಕಡಿವಾಣ ಹಾಕುವುದು ಇದರ ಉದ್ದೇಶವಾಗಿದೆ.

**ಮೂರು ವರ್ಷಗಳ ಕಾಲ ಜೈಲು ಶಿಕ್ಷೆ**–ದ್ವೇಷ ಭಾಷಣ ಮಾಡಿದರೆ ಮೂರು ವರ್ಷಗಳ ಕಾಲ ಜೈಲು ಶಿಕ್ಷೆ ನೀಡುವ ಅವಕಾಶ ವಿಧೇಯಕದಲ್ಲಿ ಉಲ್ಲೇಖ ಮಾಡಲಾಗಿದೆ. ದ್ವೇಷ ಭಾಷಣದ ಮೂಲಕ ಧಾರ್ಮಿಕ, ಜನಾಂಗೀಯ, ಜಾತಿ, ಸಮುದಾಯ, ಲಿಂಗ, ಲೈಂಗಿಕ ದೃಷ್ಟಿಕೋನ, ಜನಸ್ಥಳ, ಭಾಷೆ, ಅಂಗವೈಕಲ್ಯ, ಬುಡಕಟ್ಟು ಕುರಿತು ಯಾವುದೇ ವ್ಯಕ್ತಿಗೆ ಹಾನಿ ಮಾಡಬಾರದು ಎಂದಿದೆ.

ದ್ವೇಷವನ್ನು ಉತ್ತೇಜಿಸುವ ಅಥವಾ ಪ್ರಚಾರ ಮಾಡುವ ವ್ಯಕ್ತಿ ಅಥವಾ ಗುಂಪಿಗೆ ಮೂರು ವರ್ಷಗಳ ಕಾಲ ಶಿಕ್ಷೆ ವಿಧಿಸಬಹುದು ಅಥವಾ 5 ಸಾವಿರ ರೂ. ದಂಡದ ಜತೆಗೆ ಶಿಕ್ಷೆ ವಿಧಿಸಬಹುದೆಂದು ವಿಧೇಯಕದಲ್ಲಿ ಉಲ್ಲೇಖಿಸಲಾಗಿದೆ. 2ನೇಪುಟಕ್ಕೆ►

## ಓಸಿ ಬಗ್ಗೆ ಪೊಲೀಸರ ನಿರ್ಲಕ್ಷ್ಯ ಎಸ್ಪಿ ಎದುರಿನಲ್ಲೇ ಜನರಿಂದ ತರಾಟೆಗೆ



**ಬಳ್ಳಾರಿ, ಡಿ.24–** ನಗರದಲ್ಲಿ ಮುಕ್ತವಾಗಿ ನಡೆಯುತ್ತಿರುವ ಮಟಕಾ (ಓಸಿ) ದಂಧೆ ಬಗ್ಗೆ ಎಸ್ಪಿ ಡಾ.ಶೋಭಾರಾಣಿ ಅವರ ಎದುರಿನಲ್ಲಿಯೇ ಸಾರ್ವಜನಿಕರು ಪೊಲೀಸರನ್ನು ತರಾಟೆಗೆ ತೆಗೆದುಕೊಂಡಿದ್ದು ಕಂಡು ಬಂದಿದೆ.

ನಿನ್ನೆ ನಗರದ ಚೇಂಬರ್ ಆಫ್ ಕಾಮರ್ಸ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಸಾರ್ವಜನಿಕರ ಸಮಸ್ಯೆಗಳ ಪರಾಮರ್ಶೆ ಸಭೆಯಲ್ಲಿ ಭಾಗಿಯಾಗಿದ್ದ ಎಸ್ಪಿ ಅವರ ಮುಂದೆಯೇ ಮಟ್ಕಾ ದಂಧೆ ನಡೆಯುವುದನ್ನು ನೋಡಿಯೂ ಪೊಲೀಸರು ಸುಮ್ಮನಿದ್ದಾರೆ ಅದರಲ್ಲೂ ನಗರದ ಎಪಿಎಂಸಿ ಪೊಲೀಸ್ ಠಾಣೆಯ ಪೊಲೀಸರ ಕಾರ್ಯವೈಖರಿ ಸಾರ್ವಜನಿಕರಿಂದ ತೀವ್ರ ಟೀಕೆಗೆ ಗುರಿಯಾಯ್ತು.

ಸಾರ್ವಜನಿಕರ ಪ್ರಶ್ನೆಗೆ ಒಂದಿಷ್ಟು ಸಿಡುಕಿನಿಂದಲೇ ಎಸ್ಪಿ ಶೋಭಾರಾಣಿ ಅವರು ನಾನಿಲ್ಲಿ ಬಂದಿರುವುದು ಸಮಸ್ಯೆ ಆಲಿಸಲು. ಸಮಸ್ಯೆ ಹೇಳಿ ಅದು ಬಿಟ್ಟು ನನ್ನೆದುರಿಗೆ ನನ್ನ ಇಲಾಖೆ ಸಿಬ್ಬಂದಿಯನ್ನು ಪ್ರಶ್ನಿಸಬೇಡಿ ಎಂದು ತಮ್ಮ ಸಿಬ್ಬಂದಿ ಪರ ನಿಂತಿದ್ದಾರೆ.

# ಕಲಬುರಗಿ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಿಂದ ಪ್ರವೇಶ ಪ್ರಾರಂಭ; ಸದುಪಯೋಗಕ್ಕೆ ವಿದ್ಯಾರ್ಥಿಗಳಿಗೆ ಸಲಹೆ

ಧೈರ್ಯದ ದಾರಿ

**ರಾಯಚೂರು,ಡಿ.24:** ಕಲಬುರಗಿಯ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ 2026-27 ಸಾಲಿಗಾಗಿ ಸ್ನಾತಕೋತ್ತರ ಕೋರ್ಸಗಳಿಗೆ ಪ್ರವೇಶಾತಿ ಆರಂಭವಾಗಿದೆ. ವಿಶ್ವವಿದ್ಯಾಲಯದಿಂದ ಪ್ರಸ್ತುತ ಪಿಜಿ ಕೋರ್ಸ್‌ಗಳಿಗೆ ಸಿಯುಇಟಿ ಮೂಲಕ ಅರ್ಹ ಅಭ್ಯರ್ಥಿಗಳಿಗೆ ಪ್ರವೇಶ ನೀಡಲಾಗುತ್ತಿದ್ದು, ಈ ಭಾಗದ ವಿದ್ಯಾರ್ಥಿಗಳು ಹೆಚ್ಚಿನ ಮಟ್ಟದಲ್ಲಿ ಪ್ರವೇಶ ಪಡೆದು ಶೈಕ್ಷಣಿಕ ಪ್ರಗತಿ ಸಾಧಿಸಬೇಕೆಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ.ಬಸವರಾಜ ಸೋಮನಮರಡಿ ಅವರು ಹೇಳಿದರು.

ರಾಯಚೂರಿನ ಪತ್ರಿಕಾ ಭವನದಲ್ಲಿ ಡಿಸೆಂಬರ್ 24ರಂದು ಪ್ರತಿಕಾಗೋಷ್ಠಿ ನಡೆಸಿ ಮಾತನಾಡಿದ ಅವರು, ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಿಂದ ಬಿಎಡ್ ಕೋರ್ಸ ಒಳಗೊಂಡಂತೆ ಸ್ನಾತಕೋತ್ತರ ಕೋರ್ಸ್ಗಳಾದ ಎಂ.ಎ ಇಂಗ್ಲಿಷ್, ಹಿಂದಿ, ಕನ್ನಡ, ಭಾಷಾಶಾಸ್ತ್ರ, ಜಾನಪದ ಮತ್ತು ಬುಡಕಟ್ಟು ಅಧ್ಯಯನ, ಅರ್ಥಶಾಸ್ತ್ರ, ಇತಿಹಾಸ, ಸಾರ್ವಜನಿಕ ಆಡಳಿತ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನಕ್ಕೆ 30 ಸೀಟು, ಎಂ.ಎಸ್ಸಿ. ಗಣಿತ, ಭೌತಶಾಸ್ತ್ರ, ರಸಾಯನ ಶಾಸ್ತ್ರ, ಭೂಗೋಳ, ಭೂ ವಿಜ್ಞಾನ, ಸಸ್ಯಶಾಸ್ತ್ರ, ಪ್ರಾಣಿಶಾಸ್ತ್ರ ಮತ್ತು ಅಂಕಿಅಂಶಗಳು ಮತ್ತು ದತ್ತಾಂಶ ವಿಶ್ಲೇಷಣೆ 30 ಸೀಟು, ಎಂ.ಎಸ್ಸಿ. ಮನೋವಿಜ್ಞಾನ 40 ಸೀಟು, ಜೆನೆಟಿಕ್ಸ್ ಮತ್ತು ಜೀನೋಮಿಕ್ 20 ಸೀಟು, ಎಂ.ಕಾಂ (ಬ್ಯಾಂಕಿಂಗ್ ಮತ್ತು ಹಣಕಾಸು ತಂತ್ರಜ್ಞಾನ) 30 ಸೀಟು, ಎಂ.ಕಾಂ 30 ಸೀಟು, ಎಂ.ಬಿ.ಎ 60 ಸೀಟು, ಎಂ.ಬಿ.ಎ



ಪ್ರವಾಸೋದ್ಯಮ ಮತ್ತು ಪ್ರಯಾಣ ನಿರ್ವಹಣೆಯಲ್ಲಿ 30 ಸೀಟು, ಸಮಾಜ ಕಾರ್ಯ 30 ಸೀಟು, ಎಂ.ಸಿ.ಎ 60 ಸೀಟು, ಎಲ್.ಎಲ್.ಎಂ 30 ಸೀಟು, ಬಿ.ಎಡ್ 50 ಸೀಟು, ಎಂ.ಎಡ್ 50 ಸೀಟು, ಎಂ.ಟೆಕ್ ಪವರ್ ಅಂಡ್ ಎನರ್ಜಿ ಇಂಜಿನಿಯರಿಂಗ್ 18 ಸೀಟು, ಎಂ.ಟೆಕ್ ಅರ್‌ಎಫ್& ಮೈಕ್ರೋವೇವ್ ಇಂಜಿನಿಯರಿಂಗ್ 18 ಸೀಟು, ಎಂ.ಟೆಕ್ ಎಐ ಮತ್ತು ಎಂಎಲ್ 24 ಸೀಟು, ಎಂಪಿಎ ಹಿಂಸ್ತುಸ್ಥಾನಿ ಗಾಯನ 10 ಸೀಟು, ಎಂಪಿಎ ಇನ್‌ಸ್ಟ್ರುಮೆಂಟಲ್ (ಹಿಂಸ್ತುಸ್ಥಾನಿ ತಬಲಾ) 10 ಸೀಟು, ಮಾಸ್ಟರ್ ಆಫ್ ವಿಸುವಲ್ ಆರ್ಟ್ಸ (ಪೆಂಟಿಂಗ್) 10 ಸೀಟುಗಳನ್ನು ಸಿಯುಇಟಿ ಪರೀಕ್ಷೆಯ ಮೂಲಕ ಅಭ್ಯರ್ಥಿಗಳಿಗೆ ನೀಡಲಾಗುತ್ತದೆ ಎಂದರು.

ಅರ್ಹ ಅಭ್ಯರ್ಥಿಗಳಿಂದ ಈಗಾಗಲೇ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಪ್ರಕ್ರಿಯೆ 2025ರ ಡಿಸೆಂಬರ 14ರಿಂದ ಪ್ರಾರಂಭವಾಗಿದೆ. ಸ್ನಾತಕ (ಯುಜಿ) ಅಂತಿಮ ಸೆಮೆಸ್ಟರನಲ್ಲಿ ಓದುತ್ತಿರುವ ಮತ್ತು ಈಗಾಗಲೇ ಉತ್ತೀರ್ಣರಾಗಿರುವ ಆಸಕ್ತ ಅರ್ಹವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿದ್ದು, ಅರ್ಜಿಗಳನ್ನು ಆನ್‌ಲೈನ್ ವೆಬ್‌ಸೈಟ್ ವಿಳಾಸ: https://exams.nta.nic.in/cuet-pg/ ನಲ್ಲಿ 2026ರ ಜನವರಿ 14 ರಾತ್ರಿ 11.50ರೊಳಗಾಗಿ ಸಲ್ಲಿಸಬಹುದಾಗಿದೆ ಎಂದರು.

ಕರ್ನಾಟಕ ಕೇಂದ್ರೀಯ ವಿಶ್ವ ವಿದ್ಯಾಲಯ ಒದಗಿಸುವ ಕೋರ್ಸ್ಗಳ ವಿವರ ಮತ್ತು ಅವುಗಳ ಅರ್ಹತೆಯ ವಿವರ ವಿಶ್ವವಿದ್ಯಾಲಯದ ವೆಬ್‌ಸೈಟ್ ವಿಳಾಸ: www.cuk.ac.in ನಲ್ಲಿ ಮತ್ತು https://nta.ac.in/, https://exams.nta.nic.in/cuet-pg/ ನಲ್ಲಿ ಲಭ್ಯವಿದೆ. ಭಾಷಾ ಪ್ರಶ್ನೆ ಪತ್ರಿಕೆಗಳು ಹೊರತು ಪಡಿಸಿ ಉಳಿದ ಎಲ್ಲಾ ಪ್ರವೇಶ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಕೇವಲ ಇಂಗ್ಲಿಷ್ ಮತ್ತು ಹಿಂದಿ ಭಾಷೆಯಲ್ಲಿರಲಿವೆ ಎಂದರು.

ಪರೀಕ್ಷೆಗಳು, ಪರೀಕ್ಷೆ ವಿಧಾನ, ವೇಳಾ ಪಟ್ಟಿ, ಅರ್ಹತೆ ಮತ್ತು ಇತರ ಮಾಹಿತಿಗಾಗಿ ಅಭ್ಯರ್ಥಿಗಳು ವೆಬ್‌ಸೈಟ್‌ನಲ್ಲಿ ಲಭ್ಯವಿರುವ ಸಿಯುಇಟಿ (ಪಿಜಿ)-2026ರ ಮಾಹಿತಿ ಬುಲೆಟಿನ್ ಪರಿಶೀಲಿಸಿಕೊಳ್ಳಬಹುದಾಗಿದೆ. ಎನ್‌ಟಿಎ ಫಲಿತಾಂಶಗಳನ್ನು ಪ್ರಕಟಿಸಿದ ನಂತರ ಪ್ರವೇಶಕ್ಕಾಗಿ ನೋಂದಾಯಿಸಲು ವಿಶ್ವವಿದ್ಯಾಲಯದಿಂದ ಅಭ್ಯರ್ಥಿಗಳಿಗೆ ಕರೆ ನೀಡಲಾಗುತ್ತದೆ ಎಂದರು.

ವಿದ್ಯಾರ್ಥಿಗಳು ಅರ್ಜಿಯ ವಿವರಗಳನ್ನು ಸಿಯುಕೆ ವೆಬ್‌ಸೈಟ್ ವಿಳಾಸ: www.cuk.ac.in ನಲ್ಲಿ ಭರ್ತಿ ಮಾಡಬೇಕು. ಹೆಚ್ಚಿನ ಮಾಹಿತಿಗಾಗಿ 011 -40759000, 2ನೇಪುಟಕ್ಕೆ►

## ಜಿಲ್ಲಾ ಮಟ್ಟದ ಪತ್ರಕರ್ತರ ಸಂಘದ ಪದಗ್ರಹಣ ಸಮಾರಂಭ ಇಂದು

**ರಾಯಚೂರು,ಡಿ.24:** ಕರ್ನಾಟಕ ಕಾರ್ಯನಿರತ ಪರ್ತ್ರಕರ್ತರ ಸಂಘದ 2025-2028ನೇ ಸಾಲಿನ ಜಿಲ್ಲಾ ಘಟಕದ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವು ನಗರದ ಕನ್ನಡ ಭವನದಲ್ಲಿ ಡಿಸೆಂಬರ್ 25ರ ಸಂಜೆ 4 ಗಂಟೆಗೆ ಆಯೋಜಿಸಲಾಗಿದೆ.

ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಅವರು ಕಾರ್ಯಕ್ರಮ ಉದ್ಘಾಟಿಸುವರು. ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ.ಲೋಕೇಶ ಅವರು ಜಿಲ್ಲಾ ಮತ್ತು ತಾಲೂಕು ಘಟಕಗಳ ನೂತನ ಪದಾಧಿಕಾರಿಗಳಿಗೆ ಪ್ರಮಾಣ ವಚನ ಬೋಧನೆ ಮಾಡುವರು.

ರಾಜ್ಯ ಸಮಿತಿ ಸದಸ್ಯ ಬಸವರಾಜ ನಾಗಡದಿನ್ನಿ, ನಿಕಟಪೂರ್ವ ರಾಜ್ಯ ಸಮಿತಿ ಸದಸ್ಯ ಶಿವಮೂರ್ತಿ ಹಿರೇಮಠ, ನಿಕಟಪೂರ್ವ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಪಾಷಾ ಹಟ್ಟಿ ಸೇರಿದಂತೆ ಇತರರು ಪಾಲ್ಗೊಳ್ಳುವರು.

ಕರ್ನಾಟಕ ಕಾರ್ಯನಿರತ ಪರ್ತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಆರ್.ಗುರುನಾಥ ಅವರು ಅಧ್ಯಕ್ಷತೆ ವಹಿಸುವರು.

ಕಾರ್ಯಕ್ರಮದ ಬಳಿಕ ರಾಜ್ಯಾಧ್ಯಕ್ಷರ ಅಧ್ಯಕ್ಷತೆಯಲ್ಲಿ ರಾಯಚೂರಿನಲ್ಲಿ ಜರುಗಲಿರುವ ಪತ್ರಕರ್ತರ ರಾಜ್ಯ ಸಮ್ಮೇಳನದ ಕುರಿತು ಪೂರ್ವಭಾವಿ ಸಭೆ ಜರುಗಲಿದೆ.

ಸಂಘದ ಎಲ್ಲ ಸದಸ್ಯರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಾಗುವ ಮೂಲಕ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಸಂಘದ ಜಿಲ್ಲಾಧ್ಯಕ್ಷ ಆರ್.ಗುರುನಾಥ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿದ್ಧಯ್ಯಸ್ವಾಮಿ ಕುಕನೂರು ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ಮಾನವಿ : ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ನಡೆದ ದತ್ತಿ ಉಪನ್ಯಾಸ ಕಾರ್ಯಕ್ರಮ

ಧೈರ್ಯದ ದಾರಿ



**ಮಾನ್ವಿ,ಡಿ.24:** ಪಟ್ಟಣದ ಬಾಲಕಿಯರ ಸರ್ಕಾರಿ ಪಿ.ಯು. ಕಾಲೇಜ್ ಸಭಾಂಗಣದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ನಡೆದ ದತ್ತಿ ಉಪನ್ಯಾಸ ಕಾರ್ಯಕ್ರಮವನ್ನು ಹಿರಿಯ ಮುಖಂಡರಾದ ಬಾಲಸ್ವಾಮಿ ಕೊಡ್ಲಿ ಉದ್ಘಾಟಿಸಿ ಮಾತನಾಡಿ ಕನ್ನಡ ಸಾಹಿತ್ಯ ಪರಿಷತ್ತು ರಾಜ್ಯದಲ್ಲಿನ ಸಾಹಿತಿಗಳನ್ನು,ಸಾಹಿತ್ಯ ಪ್ರಕರಗಳನ್ನು ಜನರಿಗೆ ಪರಿಚಯಿಸುವುದರ ಜೋತೆಗೆ ನಾಡು ,ನುಡಿ,ಜಲ,ಬಾಷೆ ರಕ್ಷಣೆಯ ವಿಚಾರದಲ್ಲಿ ಸಾದ ಮುಂಚುಣಿಯಲ್ಲಿದ್ದು ಹೋರಾಟ ನಡೆಸುತ್ತ ಬಂದಿದೆ ನಮ್ಮ ರಾಜ್ಯದಲ್ಲಿ ಅನೇಕ ರಾಜ್ಯಗಳಿಂದ ಬಂದಿರುವ ಬಹುಬಾಷಿಕರನ್ನು ಕೂಡ ಸೌಹಾರ್ಧಯುತವಾಗಿ ಬದುಕುವುದಕ್ಕೆ ಅವಕಾಶ ನೀಡುವ ಮೂಲಕ ನಮ್ಮ ಕನ್ನಡಿಗರು ಸೌಹಾರ್ದತೆಗೆ ಹೆಸರಾಗಿದ್ದಾರೆ ಮುಂದಿನ ದಿನಗಳಲ್ಲಿ ಕ.ಸಾ.ಪ. ತಾಲೂಕು ಘಟಕವು ಗ್ರಾಮೀಣ ಭಾಗದಲ್ಲಿನ ಜನಪದರ ಸಾಹಿತ್ಯವನ್ನು ಜನಪದರನ್ನು ಪರಿಚಯಿಸುವ ಕಾರ್ಯವನ್ನು ಮಾಡಬೇಕು ಎಂದು ಕರೆ ನೀಡಿದರು.

ಕ.ಸಾ.ಪ. ತಾಲೂಕು ಅಧ್ಯಕ್ಷರಾದ ಶರಣಬಸವ ನೀರಮಾನ್ವಿ ಮಾತನಾಡಿ ಕನ್ನಡ ಸಾಹಿತ್ಯ ಪರಿಷತ್ತು ಹಲವಾರು ದತ್ತಿ ದಾನಿಗಳಿಂದ ದತ್ತಿಯನ್ನು ಪಡೆದು ಶಾಲಾ ವಿದ್ಯಾರ್ಥಿಗಳಿಗೆ ಕನ್ನಡ ಸಾಹಿತಿಗಳನ್ನು ಹಾಗೂ ಕನ್ನಡ ಸಾಹಿತ್ಯವನ್ನು ಪರಿಚಯಿಸುವ ಕಾರ್ಯವನ್ನು ಮಾಡುತ್ತಿದೆ. ನಮ್ಮ ಬದುಕಿನ ಬಾಷೆ ಮಾತೃಬಾಷೆ ಕನ್ನಡಕ್ಕೆ ಇಂದು ಹೆಚ್ಚಿನ ಅದ್ಯತೆಯನ್ನು ನೀಡಬೇಕಾಗಿದೆ ಅಂಗ್ಲ ಮಾಧ್ಯಮ 2ನೇಪುಟಕ್ಕೆ►

## ರೈತರ ಭದ್ರತೆಯ ಬದುಕಿಗೆ ಸಮಗ್ರ ಅಭಿವೃದ್ಧಿ ಯೋಜನೆ ಅಗತ್ಯ: ಕಲ್ಮಠ ಶ್ರೀ

ಧೈರ್ಯದ ದಾರಿ




**ಮಾನ್ವಿ,ಡಿ.24:** ಪಟ್ಟಣದ ಕಲ್ಮಠ ವಿದ್ಯಾಸಂಸ್ಥೆಯಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ರೈತ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಕಲ್ಮಠದ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಾಚನ ನೀಡಿ ರೈತರು ದೇಶದ ಆಹಾರ ಭದ್ರತೆಗೆ ಕಾರಣರಾಗಿದ್ದರು ಕೂಡ ನಮ್ಮ ರೈತರ ಬದುಕು ಆನಂದದಾಯಕವಾಗುವುದಕ್ಕೆ, ರೈತರ ಭದ್ರತೆಗೆ, ರೈತರ ಸಮಗ್ರ ಅಭಿವೃದ್ಧಿಗೆ ಸರ್ಕಾರದಿಂದ ಅಗತ್ಯ ಯೋಜನೆ ರೂಪಿಸುವುದು ಅಗತ್ಯವಿದೆ ಪ್ರತಿ ತುತ್ತಿನ ಹಿಂದೆ ಸಾವಿರಾರು ಜನ ರೈತರ ಶ್ರಮವಿದೆ ಎನ್ನುವುದನ್ನು ನಾವು ಯಾವತ್ತು ಮರೆಯಬಾರದು. ರೈತರ ಪಂಪಸೆಟ್ ಗಳಿಗೆ ಸರ್ಕಾರದಿಂದ ಸಮರ್ಪಕವಾಗಿ ವಿದ್ಯುತ್ ಒದಗಿಸಬೇಕು. ನಾವು ಉಳಿಯಬೇಕಾದರೆ ನಮಗೆ ಅಗತ್ಯವಾಗಿ ಮಳೆ,ನೆರಳು,ಉಸಿರಿಗೆ ಅಗತ್ಯವಿರುವ ಅಮ್ಲಜನಕ ದೋರೆಯಬೇಕಾದಲ್ಲಿ ಹೆಚ್ಚು ಹೆಚ್ಚು ಮರಗಳನ್ನು ನೆಟ್ಟು ಬೆಳೆಸಬೇಕಾಗಿದೆ. ಮರವಿದ್ದರೆ ಮಳೆ, ಮಳೆಯಿದ್ದರೆ ಬೆಳೆ ಬೆಳೆಯಿದ್ದರೆ ಬದುಕು ಎಂದು ತಿಳಿಸಿದರು.

ಉಪನ್ಯಾಸಕಿ ಗೌರಮ್ಮ ಇವರು ರಾಷ್ಟ್ರೀಯ ರೈತರ ದಿನಾಚರಣೆ ಕುರಿತು ಉಪನ್ಯಾಸ ನೀಡಿದರು. ತಾಲೂಕಿನ ಪ್ರಗತಿಪರ ರೈತರಿಗೆ ಕಲ್ಮಠ ಶ್ರೀ ಕೃಷಿರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ವಿದ್ಯಾರ್ಥಿಗಳಿಂದ ರೈತರ ಪಾದಪೂಜೆ ನಡೆಯಿತು. ಶಾಲೆಯ ಆವರಣದಲ್ಲಿ ವಿದ್ಯಾರ್ಥಿಗಳಿಂದ 2ನೇಪುಟಕ್ಕೆ►

# ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ನಡೆದ ಹಲುಗಂಬ ಉತ್ಸವ



ಧೈರ್ಯದ ದಾರಿ

**ಅರಕೇರಾ,ಡಿ.24–**ತಾಲೂಕಿನ ಬಿ.ಗಣೇಕಲ್ ಗ್ರಾಮದ ಶ್ರೀ ಮಾರುತೇಶ್ವರ ದೇವರ ಹಾಲುಗಂಬ ಉತ್ಸವ ಸಹಸ್ರಾರು ಭಕ್ತರ ಸಮ್ಮುಖದಲ್ಲಿ ಬುಧವಾರ ಸಂಜೆ ಅದ್ದೂರಿಯಾಗಿ ನಡೆಯಿತು.

ಶ್ರೀ ಮಾರುತೇಶ್ವರ ದೇವರ ಜಾತ್ರಾ ಮಹೋತ್ಸವ ಎಳ್ಳ ಅಮವಾಸ್ಯೆಯ ಆರನೇ ದಿನ ನಡೆಯುವ ಹಾಲುಗಂಬ ಹತ್ತುವ ಸ್ಪರ್ಧೆಯಲ್ಲಿ ಚಿಕ್ಕ ಮಕ್ಕಳು, ಯುವಕರು ಉತ್ಸಾಹದಿಂದ ಪಾಲ್ಗೊಂಡಿದ್ದರು.

ಸತತ ಮೂರು ಗಂಟೆಗೂ ಅಧಿಕ ಸಮಯ ಹಾಲುಗಂಬ ಉತ್ಸವ ಸ್ಪರ್ಧೆ ನಡೆಯಿತು. ಒಬ್ಬರ ಮೇಲೆ ಒಬ್ಬರು ಹಾಲುಗಂಬ ಹತ್ತುತ್ತಾ ಕೆಳಗೆ ಜಾರಿ ಬೀಳುವ ದೃಶ್ಯಗಳನ್ನು ಕಂಡು ನೆರೆದಿದ್ದ ಯುವಕರು ಶಿಳ್ಳೆ, ಚಪ್ಪಾಳೆಗಳ ಮೂಲಕ ಸ್ಪರ್ಧಾಳುಗಳನ್ನು ಹುರಿದುಂಬಿಸುತ್ತಿದ್ದರು.

ಹಲುಂಗಬಕ್ಕೆ ಎರಚುತ್ತಿದ್ದ ನೀರಿನ ರಸಭಸಕ್ಕೆ ಕಂಬ ಹತ್ತಲು ಹರಸಾಹಸ ಪಡುವಂತಾಯಿತು. ನೂತನವಾಗಿ ತಯಾರಿಸಿದ ಹಾಲುಗಂಬವನ್ನು ಎಳ್ಳು ಅಮಾವಾಸ್ಯೆಯ ಮರುದಿನ ಶ್ರೀ ಮಾರುತೇಶ್ವರ ದೇವಸ್ಥಾನದವರೆಗೆ ಮೆರವಣಿಗೆ ಮೂಲಕ ಸ್ಥಾಪಿಸಲಾಯಿತು. ಬುಧವಾರ ಬೆಳಿಗ್ಗೆಯಿಂದ ದೇವಸ್ಥಾನದಲ್ಲಿ ಶ್ರೀ ಮಾರುತೇಶ್ವರ ಮೂರ್ತಿಗೆ ಎಲೆ ಪೂಜೆ ಜೊತೆಗೆ ವಿಶೇಷ ಪೂಜೆಗಳು ನಡೆದವು. ಸುತ್ತಲಿನ ತಾಂಡಾಗಳಿಂದ, ವಿವಿಧ ಗ್ರಾಮಗಳ ಗ್ರಾಮಸ್ಥರು ಉತ್ಸವದಲ್ಲಿ ಪಾಲ್ಗೊಂಡು ಉತ್ಸವಕ್ಕೆ ಮೆರುಗು ನೀಡಿದರು.

ಹಾಲುಗಂಬಕ್ಕೆ ಲೋಳೆ ರಸ, ಜಾಜು ಲೇಪನ ಮಾಡಲಾಗಿತ್ತು. ಕಂಬದ ಮೇಲೆ ಕುಳಿತ ಪೂಜಾರಿ ಮೇಲಿಂದ ಹಾಲು, ಮಜ್ಜಿಗೆ, ನೀರು ಬಿಟ್ಟರು. ಸ್ಪರ್ದಾಳುಗಳು ನಾ ಮುಂದು, ತಾ ಮುಂದು ಎಂದು ಪೈಪೋಟಿ ತೋರಿದರು. ಸಿಳ್ಳೆ, ಕೆಕೆ, ಚಪ್ಪಾಳೆ ಮೊಳಗಿದ್ದವು. ಸ್ಪರ್ಧಾಳುಗಳು ಕಂಬ ಹತ್ತುವಾಗ ಜಾರಿ ಬೀಳುವ ದೃಶ್ಯ ಸಾಮಾನ್ಯವಾಗಿತ್ತು. ಕೊನೆವರೆಗೂ ಬಸವರಾಜ ಪಿಲಿಗುಂಡ ಎನ್ನವವರು ಪೈಪೋಟಿ ಪ್ರದರ್ಶನ ಮಾಡಿದರು. ಸಂಜೆ 6.35 ಗಂಟೆಯಾದರೂ ಯಾವ ಸ್ಪರ್ಧಾಳುಗಳು ಹಾಲುಗಂಬದ ತುದಿ ತಲುಪಿ ಪ್ರಥಮರಾಗದ ಹಿನ್ನಲೆ ಕಂಬದ ಮೇಲೆ ಕುಳಿತ ಪೂಜಾರಿಯೇ ಕಂಬವನ್ನು ಹರಿದು ಸ್ಪರ್ಧೆಗೆ ಅಂತ್ಯ ಹಾಡಿದರು.


# ಡಿ.27 ರಂದು ಮಾನ್ವಿಯಲ್ಲಿ ಬಸವರಾಜಸ್ವಾಮಿ ಇವರ ಬಸವ ಗೀತೆ ಗ್ರಂಥ ಲೋಕಾರ್ಪಣೆ

ಧೈರ್ಯದ ದಾರಿ

**ಮಾನ್ವಿ ಡಿ–24–** ಗ್ರಂಥ ಲೋಕಾರ್ಪಣೆ ಕಾರ್ಯಕ್ರಮವನ್ನು ಡಿ.27 ರಂದು ಶನಿವಾರ ಸಾಯಂಕಾಲ 5 ಗಂಟೆಗೆ ಮಾನ್ವಿ ಪಟ್ಟಣದ ಬಿ.ವಿ.ಆರ್ ಇ–ಟೆಕ್ನೋ ಸ್ಕೂಲ್ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಶ್ರೀ ಬಸವ ಸೇವಾ ಪ್ರತಿಷ್ಠಾನ ಹಾಗೂ ಸುದ್ದಿಮೂಲ ದಿನಪತ್ರಿಕೆ ರಾಯಚೂರು, ಬಸವ ಕೇಂದ್ರ ಮಾನ್ವಿ, ಶರಣ ಸಾಹಿತ್ಯ ಪರಿಷತ್ತು ಮಾನ್ವಿ, ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ಮಾನ್ವಿ ಹಾಗೂ ತಾಲೂಕಾ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟ ಮಾನ್ವಿ ಇವರ ಸಂಯುಕ್ತಾಶ್ರಯದಲ್ಲಿ ನಡೆಯುವ ಸಮಾರಂಭವನ್ನು ನಿವೃತ್ತ ಶಿಕ್ಷಣಾಧಿಕಾರಿ ಡಿ.ಜಿ.ಕರ್ಕಿಹಳ್ಳಿ ಉದ್ಘಾಟಿಸುವರು.ನಿವೃತ್ತ ಉಪನ್ಯಾಸಕ ಬಿ.ಜಿ.ಹುಲಿ ಗ್ರಂಥ ಲೋಕಾರ್ಪಣೆ ಮಾಡಿ ಪುಸ್ತಕ ಕುರಿತು ಮಾತನಾಡುವರು. ಬಸವ ಕೇಂದ್ರದ ಗೌರವಾಧ್ಯಕ್ಷರಾದ ಡಾ.ಬಸವಪ್ರಭು ಪಾಟೀಲ್ ಬೆಟ್ಟದೂರು ಅಧ್ಯಕ್ಷತೆ ವಹಿಸುವರು.

ಸಮಾರಂಭದಲ್ಲಿ ಲೇಖಕ ಹಾಗೂ ಸುದ್ದಿಮೂಲ ಸಂಪಾದಕ ಬಸವರಾಜಸ್ವಾಮಿ ಹಾಗೂ ಮುಖ್ಯ ಅತಿಥಿಗಳಾಗಿ ಬಸವ ಕೇಂದ್ರದ ಅಧ್ಯಕ್ಷ ಜಿ.ಎಂ.ರಂಗಪ್ಪ ಮೇದಾ, ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಕೆ.ಈ.ನರಸಿಂಹ, ಕಸಾಪ ಅಧ್ಯಕ್ಷ ಶರಣಬಸವ ನೀರಮಾನ್ವಿ, ತಾಲೂಕಾ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ಅಧ್ಯಕ್ಷ ರಾಜಾ ಸುಭಾಶ್ಚಂದ್ರ ನಾಯಕ, ನಿಕಟಪೂರ್ವ ಅಧ್ಯಕ್ಷ ಹೆಚ್.ಶರ್ಫುದ್ದೀನ್ ಪೋತ್ನಾಳ್, ಕಸಾಪ ಮಾಜಿ ಅಧ್ಯಕ್ಷ ಮೂಕಪ್ಪ ಕಟ್ಟಿಮನಿ, ಬಿವಿಆರ್ ಶಿಕ್ಷಣ ಸಂಸ್ಥೆ ಅಧ್ಯಕ್ಷ ಬಿ.ವಿ.ರೆಡ್ಡಿ ಭಾಗವಹಿಸುವರು. ಕಾರಣ ಸಕಲರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಸುದ್ದಿಮೂಲ ವರದಿಗಾರ ಪಿ.ಪರಮೇಶ ಪತ್ರಿಕಾ ಪ್ರಕಟಣೆ ಮೂಲಕ ಕೋರಿದ್ದಾರೆ.




# ಬಿ.ವಿ.ಆರ್ ಇ–ಟೆಕ್ನೋ ಶಾಲೆ ಆವರಣದಲ್ಲಿ ಕ್ರಿಸ್ ಮಸ್ ಆಚರಣೆ



ಧೈರ್ಯದ ದಾರಿ

**ಮಾನ್ವಿ,ಡಿ.24–** ಪಟ್ಟಣದ ಬಿ.ವಿ.ಆರ್ ಇ–ಟೆಕ್ನೋ ಶಾಲೆ ಆವರಣದಲ್ಲಿ ಕ್ರಿಸ್ ಮಸ್ ಹಬ್ಬದ ಅಂಗವಾಗಿ ಶಾಲೆಯ ವಿದ್ಯಾರ್ಥಿಗಳಿಗೆ ಕ್ರಿಸ್ ಮಸ್ ಹಬ್ಬದ ಕುರಿತು ಶಾಲೆಯ ಮಕ್ಕಳು ನೃತ್ಯ ರೂಪಕದ ಮೂಲಕ ತಿಳಿಸಿಕೊಟ್ಟರು ಹಾಗೂ ಯೇಸು ಕ್ರೀಸ್ತನ ಜನ್ಮ ವೃತ್ತಂತವನ್ನು ತಿಳಿಸುವ ರೂಪಕಗಳನ್ನು ಮಕ್ಕಳು ಅಭಿನಯಿಸಿದರು. ಛದ್ಮವೇಶವನ್ನು ಧರಿಸಿ ಕೊಂಡು ಸಂಭ್ರಮದಿಂದ ಹಬ್ಬವನ್ನು ಆಚರಿಸಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಬಿ.ವಿ.ರೆಡ್ಡಿ, ಕಾರ್ಯದರ್ಶಿ ಬಿ.ಪದ್ಮಾವತಿ, ಮುಖ್ಯಗುರು ಸರ್ ಮತ್ ಖಾನ್, ಶಿಕ್ಷಕರಾದ ಶ್ರೀಕಾಂತ್ ತಡಕಲ್, ದೈಹಿಕ ಶಿಕ್ಷಕರಾದ ಇಸಾಕ್ ,. ಅಲ್ಬರ್ಟ, .ಕು. ಸುನಿತಾ, ತ್ರಿವೇಣಿ ಸೇರಿದಂತೆ ಶಾಲೆಯ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು.

ಮೊದಲನೇ ಪುಟದಿಂದ

# ದ್ವೇಷ ಭಾಷಣ ಕಾಯ್ದೆ ಅಂಗೀಕರಿಸದಂತೆ ಗೌರ್ನರ್‌ಗೆ ಬಿಜೆಪಿ ದೂರು

ಈ ಮೂಲಕ ದ್ವೆಷ ಭಾಷಣಕ್ಕೆ ತಡೆ ನೀಡುವುದು ಸರ್ಕಾರದ ಉದ್ದೇಶವಾಗಿದೆ.

ಕಳೆದ ಜೂನ್ ನಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲೆ ಕರಡು ವಿಧೇಯಕ ಪ್ರಸ್ತಾಪ ಮಾಡಲಾಗಿತ್ತು.ವಿಧೇಯಕ ಕಾನೂನು ಆಗಿ ಜಾರಿಗೆ ಬಂದರೆ ರಾಜಕೀಯ ದ್ವೇಷಕ್ಕೆ ಅಪಾಯಕಾರಿ ಅಸ್ತ್ರವಾಗುತ್ತದೆ. ಕಾಂಗ್ರೆಸ್ ದೇಶದಲ್ಲಿ ತುರ್ತು ಪರಿಸ್ಥಿತಿ ಘೋಷಿಸಿದ ಇತಿಹಾಸವಿದೆ. ಪೊಲೀಸ್ ರಾಜ್ಯವನ್ನಾಗಿಸುವ ಪ್ರಯತ್ನ ನಡೆದಿದೆ ಎಂದು ಹಲವಾರು ಸದಸ್ಯರು ಆರೋಪಿಸಿದ್ದರು.

ಮಸೂದೆಯನ್ನು ಕಾನೂನಾಗಿ ಅಂಗೀಕರಿಸಿದಾಗ ರಾಜಕೀಯ ವಿರೋಧಿಗಳ ವಿರುದ್ಧ ಸುಳ್ಳು ಪ್ರಕರಣಗಳನ್ನು ದಾಖಲಿಸಲು ಬಳಸಲಾಗುತ್ತದೆ ಎಂಬುದು ಪ್ರತಿಪಕ್ಷಗಳ ನಾಯಕರ ಆತಂಕವಾಗಿದೆ.

# ಕಲಬುರಗಿ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದಿಂದ ಪ್ರವೇಶ ಪ್ರಾರಂಭ; ಸದುಪಯೋಗಕ್ಕೆ ವಿದ್ಯಾರ್ಥಿಗಳಿಗೆ ಸಲಹೆ

011–69227700 ಅನ್ನು ಸಂಪರ್ಕಿಸಬಹುದು. ಅಥವಾ helpdesk-cuetpg@nta.ac.in ನಲ್ಲಿ ಇ–ಮೇಲ್ ಮಾಡಬಹುದು. ಜೊತೆಗೆ ಅಭ್ಯರ್ಥಿಗಳು ಪರೀಕ್ಷೆಗೆ ಸಂಬಂಧಿಸಿದ ಇತ್ತೀಚಿನ ನವೀಕರಣಗಳಿಗಾಗಿ ಎನ್‌ಟಿಎ ವೆಬ್‌ಸೈಟ್(ಗಳು) www.nta.ac.in ಮತ್ತು https://exams.nta.nic.in/cuet-pg/ ನೊಂದಿಗೆ ಸಂಪರ್ಕದಲ್ಲಿರಲು ಸೂಚಿಸಲಾಗಿದೆ ಎಂದು ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ ನೀಡಿದರು.

# ಮಾನವಿ : ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ವತಿಯಿಂದ ನಡೆದ ದತ್ತಿ ಉಪನ್ಯಾಸ ಕಾರ್ಯಕ್ರಮ

ಶಿಕ್ಷಣ ನಮ್ಮ ವೃತ್ತಿಗೆ ಅನುಕೂಲವಾದರು ಕೂಡ ನಮ್ಮ ಮಾತೃಬಾಷೆಯನ್ನು ಉಳಿಸಿ ಬೆಳೆಸುವ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ ಎಂದು ತಿಳಿಸಿದರು.

ದಿ.ದ್ಯಾಸನೂರು ತಿಪ್ಪಣ್ಣಶೆಟ್ಟಿ, ದಿ.ಕು, ಸೌಮ್ಯ ದ್ಯಾಸನೂರು ಮಾನ್ವಿ ಸ್ಮಾರಕ ದತ್ತಿಗಳಾದ ಶಿಕ್ಷಣ ಮತ್ತು ಸ್ವಾತಂತ್ರ,ಶಿಕ್ಷಣ ಅಂದು ಮತ್ತು ಇಂದು ವಿಷಯ ಕುರಿತು.ನಿವೃತ್ತ ಕನ್ನಡ ಉಪನ್ಯಾಸಕರಾದ ರೇವಣಸಿದ್ದಯ್ಯ ಹಿರೇಮಠ ಉಪನ್ಯಾಸ ನೀಡಿ ವ್ಯಕ್ತಿಯನ್ನು ಪರಿಪೂರ್ಣವಾಗಿಸುವಲ್ಲಿ ಶಿಕ್ಷಣ ಪ್ರಮುಖ ಪಾತ್ರವನ್ನು ವಹಿಸುತ್ತದೆ. ಒಬ್ಬ ವ್ಯಕ್ತಿ ಶಿಕ್ಷಣದಿಂದ ಮಾತ್ರ ಉನ್ನತವಾದ ಜೀವನವನ್ನು ಕಟ್ಟಿಕೊಳ್ಳುವುದಕ್ಕೆ ಪರಿಪೂರ್ಣವಾದ ವ್ಯಕ್ತಿತ್ವವನ್ನು ರೂಪಿಸಿಕೊಳ್ಳುವುದಕ್ಕೆ ಸಾಧ್ಯವಿದೆ ಇಂದಿನ ಅಧುನಿಕ ಜಗತ್ತಿನಲ್ಲಿ ಪ್ರತಿಯೊಬ್ಬರಿಗೂ ಕೂಡ ತಮ್ಮ ಆಯ್ಕೆಯ ವಿಷಯದಲ್ಲಿ ಶಿಕ್ಷಣವನ್ನು ಪಡೆದುಕೊಳ್ಳುವುದಕ್ಕೆ ಅನೇಕ ಅವಕಾಶವಿದೆ ಶಿಕ್ಷಣದಿಂದ ಮಾತ್ರ ಜ್ಞಾನವನ್ನು ಪಡೆಯುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ದತ್ತಿ ದಾನಿಗಳಾದ ದ್ಯಾಸನೂರುರಾಮಚಂದ್ರಶೆಟ್ಟಿ, ಉಪನ್ಯಾಸಕರಾದ ಸೈಯಾದ್ ಮಿನಾಜ್ ಉಲ್ ಹಸನ್ ,ಕಾ,ನಿ.ಪ.ತಾಲೂಕು ಅಧ್ಯಕ್ಷರಾದ ಅಶೋಕ ತಡಕಲ್ ರವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರಾದ ನಾಗಮಲ್ಲೇಶ, ಹಿರಿಯ ಮುಖಂಡರಾದ ಜಿ,ನಾಗರಾಜ ,ಮಹಿಮೂದಾಬೇಗಂ, ಸರ್ಕಾರಿ ನೌಕರರ ಸಂಘದ ಕಾರ್ಯದರ್ಶಿ ಹಣಪಣ್ಣ ಚಂಡೂರು,ರವಿಶರ್ಮ,ಲಕ್ಷ್ಮಣ ಜಾನೇಕಲ್ ,ಚನ್ನಬಸವ ಮಾಡಗೀರಿ ಉಪನ್ಯಾಸಕರು, ಹನುಮಂತ ಕೋಟೆ, ಸೇರಿದಂತೆ ಇನ್ನಿತರರು ಇದ್ದರು.

# ರೈತರ ಭದ್ರತೆಯ ಬದುಕಿಗೆ ಸಮಗ್ರ ಅಭಿವೃದ್ಧಿ ಯೋಜನೆ ಅಗತ್ಯ: ಕಲ್ಮಠ ಶ್ರೀ

ಗ್ರಾಮೀಣ ಸೋಗಡಿನ ಜೀವನವನ್ನು ಪರಿಚಯಿಸುವ ಕಾಳು,ಧಾನ್ಯಗಳನ್ನು ಕುಟ್ಟುವುದು, ಬೀಸುವುದು,ರೋಟ್ಟಿ ಮಾಡುವುದು, ,ಭತ್ತರಾಶಿ ಮಾಡುವದು ಸೇರಿದಂತೆ ವಿವಿಧ ರೂಪಕಗಳು ಗಮನ ಸೇಳೆದವು.

ಕಾರ್ಯಕ್ರಮದಲ್ಲಿ ಮುಖ್ಯಗುರು ಮಂಜುನಾಥ ಕಮತರ್, ತಾಲೂಕಾ ವಕೀಲರ ಸಂಘದ ಅಧ್ಯಕ್ಷ ರವಿಕುಮಾರ ಪಾಟೀಲ, ಪ್ರೌಢಶಾಲಾ ಮುಖ್ಯೋಪಾಧ್ಯಾಯ ಪ್ರಭಯ್ಯ ಸ್ವಾಮಿ ಅಧ್ಯಕ್ಷತೆ ವಹಿಸಿದ್ದರು ಆಡಳಿತಾಧಿಕಾರಿ ಸಂಗಯ್ಯ ಸ್ವಾಮಿ. ಆರ್, ವೆಂಕಯ್ಯ ಶೆಟ್ಟಿ , ಶಂಕರಾನಂದ , ಕೃಪಾಸಾಗರ ಪಾಟೀಲ್, ಕಲ್ಮಠ ಪಿಯು ಕಾಲೇಜಿನ ಪ್ರಾಚಾರ್ಯರಾದ ಎಸ್.ಎಸ್. ಪಾಟೀಲ್. ಕಲ್ಮಠ ಪದವಿ ಕಾಲೇಜಿನ ಪ್ರಾಚಾರ್ಯರಾದ ಸಿದ್ದನಗೌಡ ಪಾಟೀಲ್. ಶಿಕ್ಷಕರಾದ ಎಂ.ಎಂ. ಹಿರೇಮಠ, ಪ್ರಭಾವತಿ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದರು.

# ಬಸ್ ನಿಲ್ದಾಣದಲ್ಲಿ ಚಿನ್ನಾಭರಣ ಕದಿಯುತ್ತಿದ್ದ ಮೂವರು ಕಳ್ಳಿಯರ ಬಂಧನ



**ಕಲಬುರಗಿ,ಡಿ.24:** ಸೇಡಂ ಮತ್ತು ಶಹಬಾದ್ ಬಸ್ ನಿಲ್ದಾಣದಲ್ಲಿ ಮಹಿಳೆಯರು ಬಸ್ ಹತ್ತುವಾಗ ಬಂಗಾರದ ಆಭರಣಗಳನ್ನು ಕಳ್ಳತನ ಮಾಡುತ್ತಿದ್ದ ಮೂವರು ಖತರನಾಕ್ ಕಳ್ಳಿಯರನ್ನು ಬಂಧಿಸಿ 11.60 ಲಕ್ಷ ಬೆಲೆಬಾಳುವ ಚಿನ್ನದ ಆಭರಣಗಳನ್ನು ಸೇಡಂ ಮತ್ತು ಶಹಬಾದ್ ಠಾಣೆಯ ಪೊಲೀಸರು ವಶಪಡಿಸಿಕೊಂಡಿದ್ದಾರೆ ಎಂದು ಜಿಲ್ಲಾ ಎಸ್ಪಿ ಅಡೂರು ಶ್ರೀನಿವಾಸಲು ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಕಲಬುರಗಿ ಬಾಪು ನಗರದ ಪ್ಲಾಸ್ಟಿಕ್ ಆರಿಸುವ ಕೆಲಸ ಮಾಡಿಕೊಂಡಿರುವ ಚಿಮ್ಮನ ಅನೀಲ ಕಾಂಬಳೆ ( 52) ,ಶಕೀಲಾ ಸಕ್ಕಾ ಉಪ್ಪಾರಿ (60 )ಮತ್ತು ಮಾಧುರಿ ಜಾಕಿ ಸಕಟ್ (40) ಬಂಧಿತರು.

ಕಳ್ಳತನ ಪ್ರಕರಣಗಳಲ್ಲಿ ಕಳುವಾದ ಮಾಲು ಮತ್ತು ಆರೋಪಿತರ ಪತ್ತೆ ಕುರಿತು ಹಾಗು ಸ್ವತ್ತಿನ ಅಪರಾಧ ತಡೆಗಟ್ಟುವ ಕುರಿತು ಚಿಂಚೋಳಿ ಉಪ ವಿಭಾಗ ಡಿ.ವೈಎಸ್.ಪಿ. ಸಂಗಮನಾಥ ಎಸ್ ಹಿರೇಮಠ ಹಾಗೂ ಶಹಾಬಾದ ಉಪ ವಿಭಾಗದ ಡಿ.ವೈ.ಎಸ್.ಪಿ ಶಂಕರಗೌಡ ಪಾಟೀಲ ಅವರ ಮಾರ್ಗದರ್ಶನದಲ್ಲಿ ಸೇಡಂ ಸಿಪಿಐ ಮಹಾದೇವ ಡಿ ,ಶಹಬಾದ್ ಪಿಐ ನಟರಾಜ್ ಲಾಡೆ ನೇತೃತ್ವದಲ್ಲಿ ಸೇಡಂ ಠಾಣೆ ಪಿಎಸ್ ಐಗಳಾದ ಉಪೇಂದ್ರಕುಮಾರ, ಶರಣಪ್ಪ ಮತ್ತು ಶಹಬಾದ್ ಠಾಣೆ ಪಿಎಸ್ಐ ಶಾಮರಾಯ ಮತ್ತು ಸಿಬ್ಬಂದಿ ವರ್ಗದವರು ಪ್ರಕರಣ ಬೇಧಿಸುವಲ್ಲಿ ಯಶಸ್ವಿಯಾಗಿದ್ದಾರೆ.ವಿಚಾರಣೆ ಕಾಲಕ್ಕೆ ಪ್ರಕರಣದಲ್ಲಿ ತಾವುಗಳು ಕಲಬುರಗಿಯಿಂದ ಸೇಡಂ ಶಹಬಾದಕ್ಕೆ ಬಂದು ಬಸ್ ನಿಲ್ದಾಣದಲ್ಲಿ ಮಹಿಳೆಯರು ಬಸ್ ಹತ್ತುವಾಗ ಮತ್ತು ಇಳಿಯುವಾಗ ಗದ್ದಲದ ಸಮಯದಲ್ಲಿ ಮಹಿಳೆಯ ಕೊರಳಲ್ಲಿದ್ದ ಮತ್ತು ಬ್ಯಾಗುಗಳಲ್ಲಿಟ್ಟಿದ್ದ ಬಂಗಾರದ ಆಭರಣಗಳನ್ನುಮೂರು ಜನರು ಕೂಡಿ ಕಳ್ಳತನ ಮಾಡಿರುವುದಾಗಿ ಒಪ್ಪಿಕೊಂಡಿದ್ದಾರೆ ಎಂದು ಎಸ್ಪಿ ಅಡೂರು ಶ್ರೀನಿವಾಸಲು ಅವರು ಸುದ್ದಿಗೋಷ್ಠಿಯಲ್ಲಿ ವಿವರಿಸಿದರು.

# ಬ್ಲೂಬರ್ಡ್ ಉಡ್ಡಯನ ಯಶಸ್ವಿ

**ನವದೆಹಲಿ, ಡಿ.24**: ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ- ಇಸ್ರೋ ಇಂದು(ಡಿಸೆಂಬರ್ 24 ರಂದು) ಎಲ್ ವಿಎಂ 3-ಎಂ6 ಮಿಷನ್ ಅನ್ನು ಯಶಸ್ವಿಯಾಗಿ ಉಡಾವಣೆ ಮಾಡಿದ್ದು, ಬ್ಲೂಬರ್ಡ್ ಬ್ಲಾಕ್ -2 ಉಪಗ್ರಹವನ್ನು ಕಕ್ಷೆಗೆ ತಲುಪಿಸಿದೆ.

ಆಂಧ್ರ ಪ್ರದೇಶದ ಶ್ರೀ ಹರಿಕೋಟಾ ಉಡ್ಡಯನ ಕೇಂದ್ರದಿಂದ ಎರಡನೇ ಲಾಂಚ್ ಪ್ಯಾಡ್‌ನಿಂದ ಬ್ಲೂಬರ್ಡ್ ಬ್ಲಾಕ್-2 ಸಂವಹನ ಉಪಗ್ರಹ ಬೆಳಿಗ್ಗೆ 8.45 ಕ್ಕೆ ಉಡಾವಣೆ ಮಾಡಲಾಯಿತು ಎಂದು ಇಸ್ರೋ ತಿಳಿಸಿದೆ.

ಅಮೆರಿಕ ಮೂಲದ ಎಎಸ್ ಟಿ ಸ್ಪೇಸ್ ಮೊಬೈಲ್‌ಗಾಗಿ ಮೀಸಲಾದ ವಾಣಿಜ್ಯ ಕಾರ್ಯಾಚರಣೆಯಾಗಿ ಕಾರ್ಯಗತಗೊಳಿಸಲಾದ ಈ ಉಡಾವಣೆಯು ಉಪಗ್ರಹ ಸಂವಹನದಲ್ಲಿ ಐತಿಹಾಸಿಕ ಮೈಲಿಗಲ್ಲನ್ನು ಗುರುತಿಸುತ್ತದೆ.

ಬ್ಲೂಬರ್ಡ್ ಬ್ಲಾಕ್ -2 ಬಾಹ್ಯಾಕಾಶ ನೌಕೆಯು ಎಲ್ ವಿಎಂ3 ರಾಕೆಟ್ ಇತಿಹಾಸದಲ್ಲಿ ಲೋ ಅರ್ಥ್ ಆರ್ಬಿಟ್‌ನಲ್ಲಿ ಇದುವರೆಗೆ ನಿಯೋಜಿಸಲಾದ ಅತ್ಯಂತ ಭಾರವಾದ ಪೇಲೋಡ್ ಆಗಿರುತ್ತದೆ. ಬೃಹತ್ 223 ಚದರ ಮೀಟರ್ ಹಂತದ ಶ್ರೇಣಿ ಆಂಟೆನಾವನ್ನು ಒಳಗೊಂಡಿರುವ ಇದು ಇಇಒದಲ್ಲಿ ಇರಿಸಲಾದ ಅತಿದೊಡ್ಡ ವಾಣಿಜ್ಯ ಸಂವಹನ ಉಪಗ್ರಹದ ಶೀರ್ಷಿಕೆಯನ್ನು ಸಹ ಹೊಂದಿದೆ.

ಈ ಮಿಷನ್ ಈ ಹಿಂದೆ ಚಂದ್ರಯಾನ -2, ಚಂದ್ರಯಾನ -3 ಮತ್ತು ಎರಡು ಒನ್ ವೆಬ್ ಕಾರ್ಯಾಚರಣೆಗಳನ್ನು ಉಡಾವಣೆ ಮಾಡಿದ ಎಲ್ ವಿಎಂ 3 ಗಾಗಿ ಉನ್ನತ ಮಟ್ಟದ ಯಶಸ್ಸನ್ನು ಅನುಸರಿಸುತ್ತದೆ. 2025 ರ ನವೆಂಬರ್ 2ರಂದು ಪೂರ್ಣಗೊಂಡ ಐಗಿಒ3-ಒ5 / ಅಒಖ-03 ಮಿಷನ್ ನಂತರ ಇಂದಿನ ಯಶಸ್ಸು ಬರುತ್ತದೆ.




ನೇರ ಸ್ಮಾರ್ಟ್ ಫೋನ್ ಸಂಪರ್ಕ

ಬ್ಲೂಬರ್ಡ್ ಬ್ಲಾಕ್ -2 ಅನ್ನು ವಿಶ್ವಾದ್ಯಂತ ಪ್ರಮಾಣಿತ ಸ್ಮಾರ್ಟ್ ಫೋನ್‌ಗಳಿಗೆ ನೇರವಾಗಿ 24/7 ಹೈಸ್ಪೀಡ್ ಸೆಲ್ಯುಲಾರ್ ಬ್ರಾಡ್ ಬ್ಯಾಂಡ್ ಅನ್ನು ಒದಗಿಸಲು ವಿನ್ಯಾಸಗೊಳಿಸಲಾಗಿದೆ. ಇದು ವಿಶೇಷ ಗ್ರೌಂಡ್ ಹಾರ್ಡ್ ವೇರ್ ಅಗತ್ಯವನ್ನು ತೆಗೆದುಹಾಕುತ್ತದೆ. ಈ ಉಪಗ್ರಹವು ಇವುಗಳನ್ನು ಸಕ್ರಿಯಗೊಳಿಸುವ ಗುರಿಯನ್ನು ಹೊಂದಿರುವ ಜಾಗತಿಕ ನಕ್ಷತ್ರಪುಂಜದ ಭಾಗವಾಗಿದೆ:

4ಜಿ ಮತ್ತು 5ಜಿ ಧ್ವನಿ ಮತ್ತು ವಿಡಿಯೊ ಕರೆಗಳು

ಹೈ-ಸ್ಪೀಡ್ ಡೇಟಾ ಸ್ಟ್ರೀಮಿಂಗ್ ಪಠ್ಯ ಸಂದೇಶ ಕಳುಹಿಸುವಿಕೆ ಮತ್ತು ಸರ್ವತ್ರ ಸಂಪರ್ಕ ಇಸ್ರೋದ ವಾಣಿಜ್ಯ ಅಂಗವಾದ ನ್ಯೂಸ್ಪೇಸ್ ಇಂಡಿಯಾ ಲಿಮಿಟೆಡ್ (ಎನ್‌ಎಸ್‌ಐಎಲ್) ಎಎಸ್ ಟಿ ಸ್ಪೇಸ್ ಮೊಬೈಲ್ ನೊಂದಿಗಿನ ಒಪ್ಪಂದದ ಮೂಲಕ ಈ ಮಿಷನ್ ಅನ್ನು ಸುಗಮಗೊಳಿಸಿದೆ. ಎಎಸ್ ಟಿ ಸ್ಪೇಸ್ ಮೊಬೈಲ್ ವಾಣಿಜ್ಯ ಮತ್ತು ಸರ್ಕಾರಿ ಬಳಕೆಗಾಗಿ ವಿಶ್ವದ ಮೊದಲ ಬಾಹ್ಯಾಕಾಶ ಆಧಾರಿತ ಸೆಲ್ಯುಲಾರ್ ಬ್ರಾಡ್ ಬ್ಯಾಂಡ್ ನೆಟ್ ವರ್ಕ್ ಅನ್ನು ನಿರ್ಮಿಸುತ್ತಿದೆ. "ಇಂದಿನ ಸುಮಾರು ಆರು ಬಿಲಿಯನ್ ಮೊಬೈಲ್ ಚಂದಾದಾರರು ಎದುರಿಸುತ್ತಿರುವ ಸಂಪರ್ಕದ ಅಂತರವನ್ನು ತೊಡೆದುಹಾಕಲು ಮತ್ತು ಸಂಪರ್ಕವಿಲ್ಲದ ಶತಕೋಟಿ ಜನರಿಗೆ ಬ್ರಾಡ್ ಬ್ಯಾಂಡ್ ತರುವ ಉದ್ದೇಶವನ್ನು ನಾವು ಹೊಂದಿದ್ದೇವೆ" ಎಂದು ಕಂಪನಿ ಹೇಳಿದೆ.

ಸೆಪ್ಟೆಂಬರ್ 2024 ರಲ್ಲಿ ಉಡಾವಣೆಯಾದ ಬ್ಲೂಬರ್ಡ್ 1-5 ಉಪಗ್ರಹಗಳ ಯಶಸ್ಸಿನ ಆಧಾರದ ಮೇಲೆ, ಕಂಪನಿಯು ತನ್ನ ನಕ್ಷತ್ರಪುಂಜವನ್ನು ವಿಸ್ತರಿಸುವುದನ್ನು ಮುಂದುವರಿಸಲು ಯೋಜಿಸಿದೆ. ಇಲ್ಲಿಯವರೆಗೆ, ಎಎಸ್ ಟಿ ಸ್ಪೇಸ್ ಮೊಬೈಲ್ ಜಾಗತಿಕವಾಗಿ 50ಕ್ಕೂ ಹೆಚ್ಚು ಮೊಬೈಲ್ ಆಪರೇಟರ್ ಗಳೊಂದಿಗೆ ಪಾಲುದಾರಿಕೆ ಹೊಂದಿದೆ, ಇದು ಗ್ರಹದ ಅತ್ಯಂತ ದೂರದ ಪ್ರದೇಶಗಳಿಗೆ ನಿರಂತರ ಇಂಟರ್ನೆಟ್ ವ್ಯಾಪ್ತಿಯನ್ನು ತರುತ್ತದೆ.

ಮೋದಿ ಹರ್ಷ

ಬ್ಲೂಬರ್ಡ್ ಬ್ಲಾಕ್ -2 ಸಂವಹನ ಉಪಗ್ರಹದ ಯಶಸ್ವಿ ಉಡಾವಣೆಗೆ ಪ್ರಧಾನಿ ನರೇಂದ್ರ ಮೋದಿ ಹರ್ಷ ವ್ಯಕ್ತಪಡಿಸಿದ್ದಾರೆ.ಈ ಸಂಬಂಧ ಟ್ವೀಟ್ ಮಾಡಿರುವ ಅವರು, "ಭಾರತದ ಯುವಜನರ ಶಕ್ತಿಯಿಂದಾಗಿ, ನಮ್ಮ ಬಾಹ್ಯಾಕಾಶ ಕಾರ್ಯಕ್ರಮ, ಹೆಚ್ಚು ಪ್ರಭಾವಶಾಲಿಯಾಗುತ್ತಿದೆ. ಐಗಿಒ -3 ಅತಿ ಹೆಚ್ಚು ಭಾರವನ್ನು ಹೊತ್ತೊಯ್ಯುವ ಮೂಲಕ ನಾವು ಗಗನಯಾನದಂತಹ ಭವಿಷ್ಯದ ಕಾರ್ಯಾಚರಣೆಗಳಿಗೆ ಅಡಿಪಾಯವನ್ನು ಬಲಪಡಿಸುತ್ತಿದ್ದೇವೆ. ಹಾಗೆಯೇ ವಾಣಿಜ್ಯ ಉಡಾವಣಾ ಸೇವೆಗಳನ್ನು ವಿಸ್ತರಿಸುತ್ತಿದ್ದೇವೆ ಮತ್ತು ಜಾಗತಿಕ ಪಾಲುದಾರಿಕೆಯನ್ನು ಬಲಗೊಳಿಸುತ್ತಿದ್ದೇವೆ ಎಂದು ಹೇಳಿದ್ದಾರೆ.

ಏತನ್ಮಧ್ಯೆ, ಇಸ್ರೋ ಅಧ್ಯಕ್ಷ ವಿ.ನಾರಾಯಣನ್, "ಉಡಾವಣಾ ವಾಹಕ, ಬ್ಲೂಬರ್ಡ್ ಬ್ಲಾಕ್ 2 ಸಂವಹನ ಉಪಗ್ರಹವನ್ನು ಉದ್ದೇಶಿತ ಕಕ್ಷೆಯಲ್ಲಿ ಯಶಸ್ವಿಯಾಗಿ ಮತ್ತು ನಿಖರವಾಗಿ ಸೇರಿಸಿದೆ. ಇದು ಅಮೆರಿಕ ಗ್ರಾಹಕರಿಗೆ ಮೊದಲ ಮೀಸಲಾದ ವಾಣಿಜ್ಯ ಉಡಾವಣೆಯಾಗಿದೆ. ಇದು ಶ್ರೀಹರಿಕೋಟಾದಿಂದ ನಮ್ಮ 104 ನೇ ಉಡಾವಣೆಯಾಗಿದೆ. ಇದು ಐಗಿಒ -3 ಉಡಾವಣಾ ವಾಹನದ 9ನೇ ಯಶಸ್ವಿ ಕಾರ್ಯಾಚರಣೆ ಆಗಿದ್ದು, ಅದರ ಶೇಕಡ 100 ರಷ್ಟು ವಿಶ್ವಾಸಾರ್ಹತೆಯನ್ನು ಪ್ರದರ್ಶಿಸುತ್ತದೆ. ಭಾರತೀಯ ಉಡಾವಣಾ ವಾಹಕವನ್ನು ಬಳಸಿಕೊಂಡು ಭಾರತದ ನೆಲದಿಂದ ಇದುವರೆಗೆ ಉಡಾವಣೆ ಮಾಡಿದ ಅತ್ಯಂತ ಭಾರವಾದ ಉಪಗ್ರಹ ಇದಾಗಿದೆ ಎಂದು ತಿಳಿಸಿದರು.

## ಕೇಂದ್ರದಿಂದ ಮ್ಯಾಚಿಂಗ್ ಗ್ರ್ಯಾಂಟ್ ಬಿಡುಗಡೆಗೆ ವಿಳಂಬ:ಶೀಘ್ರವೇ ಕೇಂದ್ರಕ್ಕೆ ನಿಯೋಗ ಕರೆದೊಯ್ಯಲಾಗುವುದು:ಡಾ.ಅಜಯ್ ಸಿಂಗ್

**ಕಲಬುರಗಿ,ಡಿ.24-** ಹಿಂದುಳಿದ ಕಲ್ಯಾಣ ಕರ್ನಾಟಕ ಪ್ರದೇಶದ ಸರ್ವಾಂಗೀಣ ಅಭಿವೃದ್ಧಿಗೆ ಸಂವಿಧಾನಕ್ಕೆ ತಿದ್ದುಪಡಿ ತಂದು 371ಜೆ ಕಾಯ್ದೆ ವಿಶೇಷ ಮೀಸಲಾತಿ ತಂದು ಆರೋಗ್ಯ, ಶಿಕ್ಷಣ ಸೇರಿದಂತೆ ಮೂಲಸೌಕರ್ಯ ಅಭಿವೃದ್ಧಿಗೆ ರಾಜ್ಯ ಸರ್ಕಾರ ಒಂದೆಡೆ ಪಣ ತೊಟ್ಟಿದರೆ, ಅತ್ತ ಕೇಂದ್ರ ಸರ್ಕಾರ ಮ್ಯಾಚಿಂಗ್ ಗ್ರ್ಯಾಂಟ್ ನೀಡದೆ ವಿಳಂಬ ಧೋರಣೆ ತೋರುತ್ತಿದೆ ಎಂದು ಕೆ.ಕೆ.ಆರ್.ಡಿ.ಬಿ. ಅಧ್ಯಕ್ಷ ಡಾ.ಅಜಯ್ ಸಿಂಗ್ ಅವರು ಹೇಳಿದರು.

ಕೆ.ಕೆ.ಆರ್.ಡಿ.ಬಿ. ಮಂಡಳಿ ಸಭಾಂಗಣದಲ್ಲಿ ಕರೆಯಲಾದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ರಾಷ್ಟ್ರಪತಿ, ಪ್ರಧಾನಮಂತ್ರಿ, ಹಣಕಾಸು ಸಚಿವರಿಗೆ ಹಲವಾರು ಬಾರಿ ಸಿ.ಎಂ. ಅವರು ಪತ್ರ ಬರೆದಿದ್ದಾರೆ. ಇದಲ್ಲದೆ ಖುದ್ದಾಗಿ ಭೇಟಿಯಾಗಿ ಮನವರಿಕೆ ಮಾಡಿದ್ದರು ಇದೂವರೆಗೆ ಅನುದಾನ ಬಂದಿಲ್ಲ. ಹೀಗಾಗಿ

ಸಿ.ಎಂ. ಅವರೊಂದಿಗೆ ಚರ್ಚಿಸಿ ಸರ್ವಪಕ್ಷ ನಿಯೋಗ ತೆಗೆದುಕೊಂಡು ಹೋಗಲು ಶೀಘ್ರ ದಿನಾಂಕ ನಿಗದಿಪಡಿಸಲಾಗುವುದು ಎಂದರು.

2013-14 ರಿಂದ 2025-26ನೇ ಸಾಲಿನ ವರೆಗೆ ರಾಜ್ಯ ಸರ್ಕಾರದಿಂದ ಕೆ.ಕೆ.ಆರ್.ಡಿ.ಬಿ ಮಂಡಳಿಗೆ 24,878 ಕೋಟಿ ರೂ. ಅನುದಾನ ಹಂಚಿಕೆ ಮಾಡಿದ್ದು, ಇದೇ ಮೊತ್ತವನ್ನು ಮಹಾರಾಷ್ಟ್ರದ ವಿದರ್ಭ ಮಾದರಿಯಲ್ಲಿ ಕೇಂದ್ರ ಸರ್ಕಾರ ಕೆ.ಕೆ.ಆರ್.ಡಿ.ಬಿ. ಮಂಡಳಿಗೆ ನೀಡಬೇಕು. ಕೇಂದ್ರದಿಂದ ಅನುದಾನ ಬಂದಲ್ಲಿ ಪ್ರದೇಶದಲ್ಲಿ ಇನ್ನು ಹಚ್ಚಿನ ಅಭಿವೃದ್ಧಿ ಕೆಲಸ



ಕಾರ್ಯಗಳು ಮಾಡಲು ಸಾಧ್ಯವಾಗಲಿದೆ ಎಂದರು.

ಶಿಕ್ಷಣ ಕ್ಷೇತ್ರದಲ್ಲಿ ಅಮೂಲಾಗ್ರ ಬದಲಾವಣೆ ತರುವ ನಿಟ್ಟಿನಲ್ಲಿ ಡಾ.ಛಾಯಾ ದೇಗಾಂವಕರ್ ನೇತೃತ್ವದ ತಜ್ಞರ ಸಮಿತಿ ಈಗಾಗಲೆ ಕಳೆದ ಡಿ.16 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಬೆಳಗಾವಿಯಲ್ಲಿ ಭೇಟಿ ಮಾಡಿ ವರದಿ ಸಲ್ಲಿಸಿದ್ದು, ಕೆ.ಪಿ.ಎಸ್. ಶಾಲೆ ನಿರ್ಮಾಣ, ದ್ವಿಭಾಷಾ ಪದ್ಧತಿ ಬೋಧನೆ, ಶಿಕ್ಷಣದಲ್ಲಿ ಗುಣಮಟ್ಟ, ಶಿಕ್ಷಕರ ಕೊರತೆ ನೀಗಿಸುವ ಸಂಬಂಧ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ವರದಿಯಲ್ಲಿ ಉಲ್ಲೇಖಿಸಲಾಗಿದೆ ಎಂದರು.

ಪ್ರಸ್ತುತ ರಾಜ್ಯದಲ್ಲಿ 247 ಕೆ.ಪಿ.ಎಸ್. ಶಾಲೆಯಲ್ಲಿ ಕಲ್ಯಾಣದಲ್ಲಿರುವುದು ಕೇವಲ 60 ಶಾಲೆ. ಹೀಗಾಗಿ ಮುಂದಿನ ಒಂದು ವರ್ಷದಲ್ಲಿ ಮಂಡಳಿಯಿಂದ 200, ಶಿಕ್ಷಣ ಇಲಾಖೆಯಿಂದ 100 ಶಾಲೆಗಳು ಈ ಭಾಗದಲ್ಲಿ ತಲೆ ಎತ್ತಲಿವೆ. ಎಸ್.ಎಸ್.ಎಲ್.ಸಿ. ಪರೀಕ್ಷೆ ಸುಧಾರಣೆಗೆ 3.44 ಕೋಟಿ ರೂ. ಖರ್ಚು ಮಾಡಲಾಗುತ್ತಿದೆ. ಇದರಲ್ಲಿ ಪ್ರತಿ ತಾಲೂಕಿಗೆ 25 ಲಕ್ಷ ವ್ಯಯ ಮಾಡಲಾಗುತ್ತಿದೆ. 5,530 ಸಮಶಿಕ್ಷಕರ ಭರ್ತಿ ಕಾರ್ಯ ನಡೆದಿದೆ. ಪ್ರಸಕ್ತ 2025-26ನೇ ಸಾಲಿನಲ್ಲಿ ಮಾರ್ಚ್ 31 ರೊಳಗೆ 4,000 ಕೋಟಿ ರೂ. ಹಣ ಖರ್ಚು ಮಾಡುವ ಮೂಲಕ ಅನುದಾನ ಖರ್ಚಿನಲ್ಲಿ ಹಿಸ ದಾಖಲೆ ಬರೆಯಲಾಗುವುದು ಎಂದು ಡಾ. ಅಜಯ್ ಸಿಂಗ್ ತಿಳಿಸಿದರು.

**ಮಲತಾಯಿ ಧೋರಣೆ,ಕೇಂದ್ರದಿಂದ ಬರಬೇಕಿದೆ 1.25 ಲಕ್ಷ ಕೋಟಿ**-ಕೇಂದ್ರ ಸರ್ಕಾರವು 15ನೇ ಹಣಕಾಸು, ಭದ್ರಾ ಮೇಲ್ದಂಡೆ ಯೋಜನೆ ಸೇರಿದಂತೆ ವಿವಿಧ ಯೋಜನೆಗಳಿಗೆ ರಾಜ್ಯಕ್ಕೆ ಹಂಚಿಕೆಯಾದ 1.25 ಲಕ್ಷ ಕೋಟಿ ರೂ. ಬಿಡುಗಡೆ ಬಿಡುಗಡೆ ಮಾಡದೆ ಮಲತಾಯಿ ಧೋರಣೆ ಅನುಸರಿಸುತ್ತಿದೆ. ಭದ್ರಾ ಮೇಲ್ದಂಡೆ ಯೋಜನೆಗೆ ಘೋಷಿಸಿದ 5,300 ಕೋಟಿ ರೂ., ಬೆಂಗಳೂರು ಅಭಿವೃದ್ಧಿ ಘೋಷಿಸಿದ 6,000 ಕೋಟಿ ರೂ., 15ನೇ ಹಣಕಾಸಿನಡಿ ಹಂಚಿಕೆ ಮಾಡಿದ ವಿಶೇಷ ಅನುದಾನ 5,495 ಕೋಟಿ ರೂ. ಗಳಲ್ಲಿ ಒಂದು ರೂಪಾಯಿ ಸಹ ಅನುದಾನ ನೀಡಿಲ್ಲ.

ಇದಲ್ಲದೆ 15ನೇ ಹಣಕಾಸು ಆಯೋಗದಲ್ಲಿನ ಆರೋಗ್ಯ ಕ್ಷೇತ್ರಕ್ಕೆ ಹಂಚಿಕೆ ಮಾಡಿದ ಅನುದಾನದಲ್ಲಿ 874 ಕೋಟಿ ರೂ., ಗ್ರಾಮೀಣ ಸ್ಥಳೀಯ ಸಂಸ್ಥೆಗೆ ಹಂಚಿಕೆ ಮಾಡಿದರಲ್ಲಿ 774 ಕೋಟಿ ರೂ., ನಗರ-ಸ್ಥಳೀಯ ಸಂಸ್ಥೆಗಳಿಗೆ ಶಿಫಾರಸ್ಸು ಮಾಡಿದ 1,028 ಕೋಟಿ ರೂ., ತೆರಿಗೆ ಸೂತ್ರ ಬದಲಾವಣೆಯಿಂದ ನಷ್ಟ 80,000 ಕೋಟಿ ರೂ., ಎನ್.ಡಿ.ಆರ್.ಎಫ್ ನಡಿ 7,254 ಕೋಟಿ ರೂ., ಕೇಂದ್ರ ಪುರಸ್ಕೃತ ಯೋಜನೆಗಳಿಗೆ 10,524, ಸೆಸ್ ಮತ್ತು ಸರ್ಚಾರ್ಜ್ ನಿಂದ 8,300 ಕೋಟಿ ರೂ. ಸೇರಿ ಒಟ್ಟಾರೆ ಕಳೆದ 5 ವರ್ಷದಲ್ಲಿ ರಾಜ್ಯಕ್ಕೆ 1,25,559 ಕೋಟಿ ರೂ. ಹಣ ಕೇಂದ್ರದಿಂದ ಬರಬೇಕಿದೆ ಎಂದಯ ಅಂಕಿ-ಸಂಕ್ಯೆಯೊಂದಿಗೆ ಅಧ್ಯಕ್ಷರು ವಿವರಿಸಿದರು.

ಹಿಂದಿನ ಯು.ಪಿ.ಎ. ಸರ್ಕಾರ ಜಾರಿಗೆ ತಂದ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಗೆ ರಾಷ್ಟ್ರಪಿತ ಮಹಾತ್ಮ ಗಾಂಧಿ ಹೆಸರಿಡಲಾಗಿತ್ತು. ಆದರೆ ಇತ್ತೀಚೆಗೆ ಕೇಂದ್ರ ಸರ್ಕಾರವು ವಿಬಿ-ಜಿ-ರಾಮ್-ಜಿ ಹೆಸರಿಡುವ ಮೂಲಕ ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರಿಗೆ ಅವಮಾನ ಮಾಡಿದೆ. ಅಲ್ಲದೆ ಕಾಯ್ದೆ ತಿದ್ದುಪಡಿ ತಂದು 60-40 ಮಾದರಿಯಲ್ಲಿ ಕೇಂದ್ರ-ರಾಜ್ಯ ಸರ್ಕಾರ ಅನುದಾನ ಭರಿಸಬೇಕೆಂದು ತಿಳಿಸಲಾಗಿದೆ. ಹಿಂದೆಲ್ಲ ಕೇಂದ್ರವೇ ಶೇ.100 ಅನುದಾನ ಭರಿಸುತ್ತಿತ್ತು. ಇದು ರಾಜ್ಯಗಳಿಗೆ ಮಾರಕವಾದ ನಿರ್ಣಯವಾಗಿದೆ. ಕೇಂದ್ರದ ಎನ್.ಡಿ.ಎ. ಸರ್ಕಾರವು ದೇಶದ ಬಡ ಜನರ ಕಲ್ಯಾಣ, ಉದ್ಯೋಗ ನೀಡುವ ಬದಲು ಕೇವಲ ಯೋಜನೆಗಳಿಗೆ ಹೆಸರು ಬದಲಾವಣೆ ಮಾಡುವಲ್ಲಿ ತಲ್ಲಿನವಾಗಿದೆ ಎಂದರು.

## ವಾಡಿಯಲ್ಲಿ ಸರ್ಕಾರಿ ಕಾಲೇಜಿಗಾಗಿ ವಿದ್ಯಾರ್ಥಿಗಳ ಸಹಿ ಚಳವಳಿ



**ವಾಡಿ: ಡಿ.24**:ಪಟ್ಟಣದಲ್ಲಿ ಸರ್ಕಾರಿ ಪದವಿಪೂರ್ವ ಹಾಗೂ ಪದವಿ ಮಹಾವಿದ್ಯಾಲಯ ಸ್ಥಾಪನೆಗಾಗಿ ಒತ್ತಾಯಿಸಿ ಜನಧ್ವನಿ ಜಾಗೃತ ಸಮಿತಿ ಹಮ್ಮಿಕೊಂಡ ಸಹಿ ಸಂಗ್ರಹ ಚಳವಳಿಯನ್ನು ಬೆಂಬಲಿಸಿ ವಿವಿಧ ಪ್ರೌಢ ಶಾಲೆಗಳ ವಿದ್ಯಾರ್ಥಿಗಳು ಹಸ್ತಾಕ್ಷರ ದಾಖಲಿಸಿ ಸರ್ಕಾರದ ಗಮನ ಸೆಳೆಯುವ ಪ್ರಯತ್ನ ಮಾಡಿದರು.

ಸಹಿ ಸಂಗ್ರಹ ಅಭಿಯಾನ ಉದ್ದೇಶಿಸಿ ಮಾತನಾಡಿದ ಜನಧ್ವನಿ ಜಾಗೃತ ಸಮಿತಿ ಉಪಾಧ್ಯಕ್ಷ ಸಿದ್ದಯ್ಯಶಾಸ್ತ್ರಿ ನಂದೂರುಮಠ, ವಾಡಿ ಪಟ್ಟಣವು ಚಿತ್ತಾಪುರ ತಾಲೂಕಿನ ಭಾಗವಾಗಿದ್ದು, ಅಂಬೇಡ್ಕರ್ ಪಾದಸ್ಪರ್ಶ ಭೂಮಿ ಎನ್ನಿಸಿಕೊಂಡಿದೆ. ಹದಿಮೂರು ಪ್ರೌಢ ಶಾಲೆಗಳಿವೆ. ಸಾವಿರಾರು ವಿದ್ಯಾರ್ಥಿಗಳು ಎಸ್ಸೆಸ್ಸೆಲ್ಸಿ ಪರೀಕ್ಷೆ ಬರೆಯುತ್ತಾರೆ. ಆದರೆ ಇಲ್ಲಿ ಸರ್ಕಾರಿ ಕಲಾ, ವಾಣಿಜ್ಯ, ವಿಜ್ಞಾನ ಕಾಲೇಜು ಸೌಲಭ್ಯ ಇಲ್ಲ ಎಂದು ಹೇಳಲು ನಮಗೆ ಮುಜುಗರ ಉಂಟಾಗುತ್ತದೆ. ಎಸ್ಸೆಸ್ಸೆಲ್ಸಿ ನಂತರ ಕಾಲೇಜು ಶಿಕ್ಷಣದಿಂದ ಬಡ ಮಕ್ಕಳು ವಂಚಿತರಾಗುತ್ತಿದ್ದಾರೆ. ಸರ್ಕಾರಕ್ಕೆ ಮನವಿ ಪಾತ್ರಗಳನ್ನು ಸಲ್ಲಿಸಿ ಸಾಕಾಗಿದೆ. ಹೀಗಾಗಿ ಹೋರಾಟದ ಮುಂದುವರಿದ ಭಾಗವಾಗಿ ಸಹಿ ಸಂಗ್ರಹ ಆಂದೋಲನ ನಡೆಸಲಾಗುತ್ತಿದೆ ಎಂದರು.

ಸರ್ಕಾರಿ ಕಾಲೇಜು, ಕೇಂದ್ರ ಬಸ್ ನಿಲ್ದಾಣ, ಸಾರ್ವಜನಿಕ ಗ್ರಂಥಾಲಯ, ಸಾರ್ವಜನಿಕ ಮೂತ್ರಾಲಯಗಳು, ಶುಲಭ ಶೌಚಾಲಯ ಸೇರಿದಂತೆ ವಿವಿಧ ಬೇಡಿಕೆಗಳಿಗಾಗಿ ಒತ್ತಾಯಿಸಿ ಸಹಿ ಸಂಗ್ರಹ ಅಭಿಯಾನಕ್ಕೆ ಚಾಲನೆ ನೀಡಲಾಗಿದೆ. ಡಿ.30 ರಂದು ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನಾ ಧರಣಿ ನಡೆಸುವ ಮೂಲಕ ಹತ್ತು ಸಾವಿರ ಸಸಿಗಳನ್ನು ಸೇಡಂ ಸಹಾಯಕ ಆಯುಕ್ತರು ಮತ್ತು ತಹಶೀಲ್ದಾರ ಅವರ ಮೂಲಕ ಸರ್ಕಾರಕ್ಕೆ ಸಲ್ಲಿಸಲು ತೀರ್ಮಾನಿಸಿದ್ದೇವೆ. ಪಟ್ಟಣದ ಪ್ರತಿಯೊಬ್ಬರೂ ಸಹ ಹಸ್ತಾಕ್ಷರ ದಾಖಲಿಸುವ ಮೂಲಕ ಹೋರಾಟವನ್ನು ಬೆಂಬಲಿಸಬೇಕು ಎಂದು ಕರೆ ನೀಡಿದರು.

ಜನಧ್ವನಿ ಜಾಗೃತ ಸಮಿತಿಯ ಕಾರ್ಯದರ್ಶಿ ಶೇಖ್ ಅಲ್ಲಾಭಕ್ಷ್, ಮುಖಂಡರಾದ ಆನಂದ ಆರ್.ಎನ್, ಈರಣ್ಣ ಯಲಗಟ್ಟಿ, ಮಹ್ಮದ್ ಇಸ್ಯೂಫ್ ಸಾಬ್ ಮುಲ್ಲಾ ಕಮರವಾಡಿ ಸೇರಿದಂತೆ ಇತರರು ಪಾಲ್ಗೊಂಡಿದ್ದರು. ಪಟ್ಟಣದ ವಿವಿಧ ಶಾಲೆಗಳ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಹರ್ಷದಿಂದ ಸಹಿ ಹಾಕಿ ಹೋರಾಟದ ದನಿ ಎತ್ತಿ ಹಿಡಿದರು. ಅನೇಕ ಜನ ಹಿರಿಯರು ಜನಧ್ವನಿ ಕಾರ್ಯಕರ್ತರ ಹೋರಾಟವನ್ನು ಶ್ಲಾಘಿಸಿ ಧನಸಹಾಯ ನೀಡಿದರು.

## ಹೆಗ್ಗಡೆಯವರ ಕಾರ್ಯವು ಸಮಾಜದ ಬೆಳವಣಿಗೆಗೆ ಪೂರಕ:ಕ್ಯಾತ್ನಾಳ

**ಸೈದಾಪುರ:ಡಿ.24:**ಡಾ.ವೀರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಹಮ್ಮಿಕೊಳ್ಳುವ ಕಾರ್ಯಕ್ರಮಗಳು ಅತ್ಯುತ್ತಮವಾಗಿದ್ದು, ಸಮಾಜದ ಬೆಳವಣಿಗೆಯಲ್ಲಿ ಪೂರಕವಾಗಿವೆ ಎಂದು ಎಪಿಎಮ್.ಸಿ ಮಾಜಿ ಅಧ್ಯಕ್ಷ ಭೀಮಣ್ಣಗೌಡ ಕ್ಯಾತ್ನಾಳ ಅಭಿಪ್ರಾಯಪಟ್ಟರು.



ಪಟ್ಟಣದ ಶ್ರೀ ಸಿದ್ಧಚೇತನಾಶ್ರಮ ಶ್ರೀ ಸಿದ್ಧಾರೂಢ ಮಠದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಮತ್ತು ಪ್ರಗತಿ ಬಂದು ಸ್ವಸಹಾಯ ಸಂಘಗಳ ಒಕ್ಕೂಟ ಸೈದಾಪುರ ವತಿಯಿಂದ ಹಮ್ಮಿಕೊಂಡ ಸಾಮೂಹಿಕ ಸಹಸ್ರ ಬಿಲ್ವಾರ್ಚನೆ ಹಾಗೂ ಧಾರ್ಮಿಕ ಸಭಾ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಪೂಜ್ಯ ಹೆಗ್ಗಡೆಯವರ ಸಾಮಾಜೀಕ ಉದ್ದೇಶಗಳು ಸಾರ್ವಜನಿಕರಿಗೆ ವಿಶೇಷವಾಗಿ ಧಾರ್ಮಿಕತೆ ಬಿಂಬಿಸುವ ಹಾಗೂ ಉತ್ತಮ ಸಂದೇಶವಿರುವ ಕಾರ್ಯಕ್ರಮಗಳಾಗಿದೆ. ಇದೇ ರೀತಿ ಯೋಜನೆಯಿಂದ ಇನ್ನೂ ಉತ್ತಮ ಕಾರ್ಯಕ್ರಮಗಳು ಜರಗುಲಿ ಎಂದು ಹಾರೈಸಿದರು. ಸಾನಿಧ್ಯ ವಹಿಸಿ ಶ್ರೀ ಸಿದ್ಧಾರೂಡ ಮಠದ ಶ್ರೀ ಸೋಮೇಶ್ವರನಂದ ಮಹಾಸ್ವಾಮಿಗಳು ಮಾತನಾಡಿ, ಇಲ್ಲಿ ದೊರೆಯುವ ಪ್ರತಿ ಸಂದೇಶಗಳನ್ನು ಪಾಲಿಸುವುದರ ಜತೆಗೆ ನಿಮ್ಮ ಕುಟುಂದ ಸದಸ್ಯರಿಗೆ ಹಾಗೂ ಮಕ್ಕಳಿಗೆ ತಿಳಿಸಿ ನಿಮ್ಮ ಕುಟುಂಬವನ್ನು ಸುಸಂಸ್ಕೃತ ಕುಟುಂಬವನ್ನಾಗಿ ಮಾಡಲು ಪ್ರಯತ್ನಿಸಿ ಎಂದು ಆಶೀರ್ವಚನ ನೀಡಿದರು.

ಇದಕ್ಕೂ ಮುಂಚಿತವಾಗಿ ಸಾಮೂಹಿಕ ಸಹಸ್ರ ಬಿಲ್ವಾರ್ಚನೆ ಕಾರ್ಯಕ್ರಮವನ್ನು ಶ್ರೀ ವಿಶ್ವನಾಥ ಮಂದಿರದ ಪ್ರಧಾನ ಅರ್ಚಕ ನಾಗರಾಜ ಸ್ವಾಮಿ ನೆರವೇರಿಸಿದರು.

ತಾಲೂಕ ಯೋಜನಾಧಿಕಾರಿ ಮಂಜುನಾಥ ಪ್ರಾಸ್ತಾವಿಕವಾಗಿ ಸಂಘದ ಕಾರ್ಯಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಹಿರಿಯ ಮುಖಂಡ ಪ್ರೇಮಚಂದ ದೋಕಾ, ರಾಷ್ಟ್ರೀಯ ಸ್ವಯಂ ಸಂಘದ ತಾಲೂಕ ಕಾರ್ಯವಾಹಕ ನಿತೀಶ್ ಕುಮಾರ ತಿವಾರಿ, ಲಾಯನ್ಸ್ ಕ್ಲಬ್ ಅಧ್ಯಕ್ಷ ವೆಂಕಟೇಶ ಜಿ ಪುರಿ, ನಿವೃತ್ತ ಶಿಕ್ಷಕ ದೇವಿಂದ್ರಪ್ಪ , ಮುಖ್ಯಗುರು ಬಿ.ಬಿ ವಡವಟ್, ಸಿದ್ಧಾರೂಢ ಮಹಿಳಾ ಸಂಘದ ಅಧ್ಯಕ್ಷೆ ನಾಗಮ್ಮ ಹಿರೇಮಠ, ಕಾರ್ಯದರ್ಶಿ ವಸಂತಮ್ಮ ಪಾಟೀಲ್ ಚಿಗಾನೂರು, ವಲಯ ಮೇಲ್ವಿಚಾರಕಿ ರಂಗಮ್ಮ, ಸ್ವಸಹಾಯ ಸಂಘ ಒಕ್ಕೂಟದ ಅಧ್ಯಕ್ಷರಾದ ರೇಣುಕಾ, ಪದ್ಮಾ, ರೋಹಿಣಿ, ಶೋಭಾ, ಮೀನಾಕ್ಷಿ, ನಿರ್ಮಾಲ, ಲಕ್ಷ್ಮೀದೇವಿ, ಪಾರ್ವತಿ ಒಕ್ಕೂಟದ ಪದಾಧಿಕಾರಿ ಕಮಲ ಕುಲಕರ್ಣಿ, ಶಿವುಕುಮಾರ, ರೇಣುಕಾ, ಬಸವರಾಜ ಮಡಿವಾಳ್, ಸಂಗಪ್ಪ ಕಡೇಚೂರು ಸೇರಿದಂತೆ ಇತರರಿದ್ದರು.

# ರಾಯಚೂರು ರಿಪೋರ್ಟರ್ಸ್ ಗಿಲ್ಡ್‌ನಿಂದ ಡಿಸೆಂಬರ್ 28ರಂದು ರಾಷ್ಟ್ರೀಯ ಪತ್ರಿಕಾ ದಿನಾಚರಣೆ, ಪ್ರಶಸ್ತಿ ಪ್ರದಾನ ಸಮಾರಂಭ

ಧೈರ್ಯದ ದಾರಿ

**ರಾಯಚೂರು,ಡಿ.24:** ರಾಯಚೂರು ರಿಪೋರ್ಟರ್ಸ್ ಗಿಲ್ಡ್, ಜಿಲ್ಲಾ ಮತ್ತು ಪ್ರಾದೇಶಿಕ ದಿನ ಪತ್ರಿಕೆಗಳ ಸಂಪಾದಕರ ಸಂಘ ರಾಯಚೂರು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಪತ್ರಿಕಾ ದಿನಾಚರಣೆ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭವನ್ನು ನಗರದ ಪತ್ರಿಕಾ ಭವನದಲ್ಲಿ ಡಿಸೆಂಬರ್ 28ರ ಬೆಳಗ್ಗೆ 10.30ಕ್ಕೆ ಹಮ್ಮಿಕೊಳ್ಳಲಾಗಿದೆ.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಉದ್ಘಾಟಿಸುವರು.

ವಿಧಾನ ಪರಿಷತ್ ಶಾಸಕರಾದ ಎ ವಸಂತಕುಮಾರ ಅವರು ಪತ್ರಕರ್ತರ ತುರ್ತುನಿಧಿಗೆ ಚಾಲನೆ ನೀಡಲಿದ್ದಾರೆ.

ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ ಅವರು ರಾಯಚೂರು ರಿಪೋರ್ಟರ್ಸ್ ಗಿಲ್ಡ್ ವೆಬ್‌ಸೈಟ್ ಲೋಕಾರ್ಪಣೆ ಮಾಡುವರು. ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಅಧ್ಯಕ್ಷರಾದ ವಿಜಯ್ ಜಾಗಟಗಲ್ ಅಧ್ಯಕ್ಷತೆ ವಹಿಸುವರು.

ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಹಾಗೂ ರಾಯಚೂರು ನಗರ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್ ಅವರು ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ ಅವರು ಪತ್ರಿಕಾ ವಿತರಕರಿಗೆ ಜರ್ಕಿನ್ ವಿತರಣೆ ಮಾಡಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಜಯವಾಣಿ ಪತ್ರಿಕೆಯ ಗಂಗಾವತಿ ಸ್ಥಾನಿಕ ಸಂಪಾದಕರಾದ ಜಗನ್ನಾಥ ಆರ್.ದೇಸಾಯಿ, ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಎಂ., ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಡಾ.ಜಿ.ಸುರೇಶ, ಜಿಲ್ಲಾ ಮತ್ತು ಪ್ರಾದೇಶಿಕ ದಿನಪತ್ರಿಕೆಗಳ ಸಂಪಾದಕರ ಸಂಘದ ಜಿಲ್ಲಾಧ್ಯಕ್ಷರಾದ ಪಿ.ಚನ್ನಬಸವ ಬಾಗಲವಾಡ ಅವರು ಸೇರಿದಂತೆ ಇತರರು ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಪ್ರಜಾಪ್ರಸಿದ್ಧ ದಿನಪತ್ರಿಕೆಯ ಹಿರಿಯ ಉಪ ಸಂಪಾದಕರಾದ ರಘುನಾಥರೆಡ್ಡಿ ಮನ್ಸಲಾಪೂರು ಅವರಿಗೆ ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಪ್ರತಿಷ್ಠಿತ ಜೀವನಮಾನ ಸಾಧನೆ ವಿಶೇಷ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ. ಕಲಬುರಗಿ ಪೀಠದ ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ಆಯುಕ್ತರಾದ ಬಿ.ವೆಂಕಟಸಿಂಗ್ ಅವರಿಗೆ ವಿಶೇಷ ಸನ್ಮಾನ ಮಾಡಲಾಗುತ್ತದೆ. ಪ್ರಜಾವಾಣಿ ದಿನಪತ್ರಿಕೆಯ ರಾಯಚೂರು ಜಿಲ್ಲಾ ವರದಿಗಾರರಾದ ಚಂದ್ರಕಾಂತ್ ಮಸಾನಿ ಅವರಿಗೆ ದಿ.ದಿದ್ದಿ ಕಿಶನ್‌ರಾವ್ ಸ್ಮರಣಾರ್ಥ ಹಾಗೂ ದಿ.ಹನುಮಂತ್ರಾಯ ಗೌಡ ಗೌರವಾರ್ಥ ಗ್ರಾಮೀಣ/ನಗರ ಅತ್ಯುತ್ತಮ ವರದಿಗಾರಿಕೆ ದತ್ತಿ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ. ಪವರ್ ಟಿವಿ ಛಾಯಾಗ್ರಾಹಕರರಾದ ಅಬ್ದುಲ್ ಖಾದರ್ ಅವರಿಗೆ ದಿ.ರಘುನಾಥ್ ಸಿಂಗ್ ಬೊಮ್ಮನಾಳ ಸ್ಮರಣಾರ್ಥ ಹಾಗೂ ಪ್ರಕಾಶ್ ಮಸ್ಕಿ ಪ್ರಾಯೋಜಿತ ಅತ್ಯುತ್ತಮ ಛಾಯಾಗ್ರಾಹಕ ದತ್ತಿ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ. ಅಮೋಘ ಕೇಬಲ್ ವರದಿಗಾರರಾದ ಶ್ರೀನಿವಾಸ ಕೆ. ಅವರಿಗೆ ಕೆ.ಅಡಿವೆಪ್ಪ ಸ್ಮಾರಕ, ಕೆ.ಸತ್ಯನಾರಾಯಣ ಪ್ರಾಯೋಜಿತ ದತ್ತಿ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ. ಪ್ರಜಾಪ್ರಸಿದ್ಧ ದಿನಪತ್ರಿಕೆಯ ವರದಿಗಾರರಾದ ಬಿ. ರಾಜು ಅವರಿಗೆ ದಿ.ಎನ್.ಕೆ.ಕುಲಕರ್ಣಿ ಸ್ಮರಣಾರ್ಥ ರಾಯಚೂರು ವಾಣಿ ಮತ್ತು ಕೊಪ್ಪಳ ಜಿಲ್ಲಾ ಅತ್ಯುತ್ತಮ ವರದಿಗಾರ ದತ್ತಿ ಪ್ರಶಸ್ತಿ ನೀಡಿ ಗೌರವಿಸಲಾಗುತ್ತದೆ ಎಂದು ರಾಯಚೂರು ರಿಪೋರ್ಟರ್ಸ್ ಗಿಲ್ಡ್ ಪ್ರಧಾನ ಕಾರ್ಯದರ್ಶಿಗಳಾದ ವೆಂಕಟೇಶ ಹೂಗಾರ ಹಾಗೂ ಜಿಲ್ಲಾ ಮತ್ತು ಪ್ರಾದೇಶಿಕ ದಿನಪತ್ರಿಕೆಗಳ ಸಂಪಾದಕರ ಸಂಘದ ಪ್ರಧಾನ ಕಾರ್ಯದರ್ಶಿ ಖಾನ್‌ಸಾಬ್ ಮೋಮಿನ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಮಾನ್ಯ ಕಾರ್ಯಕರ್ತನಾಗಿರುತ್ತೇನೆ ಡಿಕೆಶಿ ವೈರಾಗ್ಯದ ಮಾತು



**ನವದೆಹಲಿ, ಡಿ. 24–** ರಾಜ್ಯ ಕಾಂಗ್ರೆಸ್‌ನಲ್ಲಿ ಅಧಿಕಾರ ಹಂಚಿಕೆಯ ಜಟಾಪಟಿ, ಪರ– ವಿರೋಧ, ಹೇಳಿಕೆಗಳು, ಹೈಕಮಾಂಡ್‌ನ ನಿರ್ಲಿಪ್ತತೆ ಎಲ್ಲದರ ನಡುವೆಯೇ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಾನು ಯಾರಿಗೂ ತೊಂದರೆ ಕೊಡಲ್ಲ. ಸಾಮಾನ್ಯ ಕಾರ್ಯಕರ್ತನಾಗಿಯೇ ಇರುತ್ತೇನೆ ಎಂಬ ವೈರಾಗ್ಯದ ಮಾತುಗಳನ್ನು ಆಡಿದ್ದಾರೆ.

ದೆಹಲಿಯ ಕರ್ನಾಟಕ ಭವನದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಾನು ನಿನ್ನೆಯಿಂದ ದೆಹಲಿಯಲ್ಲೇ ಇದ್ದೇನೆ.ವರಿಷ್ಠರನ್ನು ಭೇಟಿ ಮಾಡಿಲ್ಲ. ವಿದೇಶದಿಂದ ರಾಹುಲ್‌ಗಾಂಧಿ ಅವರು ನಿನ್ನೆ ಬಂದಿದ್ದಾರೆ. ಅವರಿಗೆ ಈಗ ತೊಂದರೆ ನೀಡಲು ಹೋಗುವುದಿಲ್ಲ. ನಾನು ಪಕ್ಷದ ಸಾಮಾನ್ಯ ಕಾರ್ಯಕರ್ತನಾಗಿಯೇ ಇರಲು ಇಷ್ಟಪಡುತ್ತೇನೆ ಎಂದು ಹೇಳಿ ಅಚ್ಚರಿ ಮೂಡಿಸಿದ್ದಾರೆ.

ನಾನು ಯಾರಿಗೂ ತೊಂದರೆ ನೀಡಲು ಬಯಸುವುದಿಲ್ಲ. ಹೈಕಮಾಂಡ್ ನಮಗೆ ಮುಕ್ತ ಸ್ವಾತಂತ್ರ ನೀಡಿದೆ. ನಾವೆಲ್ಲರೂ ಒಟ್ಟಾಗಿ, ಒಂದಾಗಿ ಜನಪರ ಕೆಲಸ ಮಾಡುತ್ತೇವೆ ಎಂದರು. ಅಧಿಕಾರ ಹಂಚಿಕೆಯ ವಿಚಾರವನ್ನು ಹೈಕಮಾಂಡ್ ಬಗೆಹರಿಸುತ್ತದೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಹೇಳಿಕೆ ನೀಡಿರುವ ಬೆನ್ನಲ್ಲೆ, ಉಪಮುಖ್ಯಮಂತ್ರಿಡಿ.ಕೆ.ಶಿವಕುಮಾರ್ ವೈರಾಗ್ಯದ ಮಾತುಗಳನ್ನು ಆಡಿ ನಾನು, ರಾಹುಲ್‌ಗಾಂಧಿ ಅವರಿಗೆ ತೊಂದರೆ ಕೊಡಲು ಬಯಸುವುದಿಲ್ಲ ಎಂದಿದ್ದಾರೆ.

ಮುಖ್ಯಮಂತ್ರಿ ಬದಲಾವಣೆ ಬಗ್ಗೆ ಯಾವುದೇ ಊಹಾ ಪೋಹಗಳಿಲ್ಲ. ನನ್ನ ಮತ್ತು ಸಿಎಂ ಬ್ರೇಕ್‌ಫಾಸ್ಟ್ ಮೀಟಿಂಗ್ ಬಹಳ ಸಾಮಾನ್ಯ ಪ್ರಕ್ರಿಯೆ. ನಾನು ಎಲ್ಲರ ಜತೆಗೆ ಬ್ರೇಕ್ ಫಾಸ್ಟ್ ಮೀಟಿಂಗ್ ಮಾಡುತ್ತೇನೆ. ಷೇರಿಂಗ್, ಕೇರಿಂಗ್ ಬಹಳ ಸಾಮಾನ್ಯ ಎಂದರು.ಮೈಸೂರಿನಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ಅಭಿಮಾನಿಗಳು ಅಹಿಂದಾ ಸಮಾವೇಶ ನಡೆಸಲು ಮುಂದಾಗಿರುವ ಬಗ್ಗೆ ಕೇಳಲಾದ ಪ್ರಶ್ನೆಗೆ, ಅವರಿಗೆ ಒಳ್ಳೆಯದಾಗಲಿ ಎಂದಷ್ಟೇ ಉತ್ತರಿಸಿದರು.

## ಸಮಾಜದ ದಕ್ಷ ಅಧಿಕಾರಿಗಳನ್ನು ಶಾಸಕರು ಟಾರ್ಗೆಟ್ ಮಾಡಿದ್ರೆ ಕಚೇರಿಗೆ ಮುತ್ತಿಗೆ ಹಾಕ್ತೀವಿ: ಮಲ್ಲಿಕಾರ್ಜುನ ಗೋಸಿ

**ಯಾದಗಿರಿ:ಡಿ.24:** ಪೊಲೀಸ್ ಸ್ಟೇಷನ್ ನಲ್ಲಿ ಅಧಿಕಾರಿಗಳು ದುಡ್ಡಿನ ರೇಟ್ ಔಟ್ಲೆಟ್ ಇಟ್ಟುಕೊಂಡಿದ್ದಾರೆ ನನ್ನ ಕ್ಷೇತ್ರದಲ್ಲಿ ನಡೆಯೋ ಅವ್ಯವಹಾರಗಳಿಗೆ ನಾನು ಜವಾಬ್ದಾರನಲ್ಲ ಗುರುಮಠಕಲ್ ಪೊಲೀಸ್ ಠಾಣೆಯ ಪಿಐ ಮತ್ತು ಯಾದಗಿರಿ ಗ್ರಾಮೀಣ ಠಾಣೆಯ ಪಿಎಸ್‌ಐ ಕಾರಣ ಎಂದು ಬೆಳಗಾವಿ ಅಧಿವೇಶನದಲ್ಲಿ ಸಮಾಜದ ಅಧಿಕಾರಿಗಳನ್ನೇ ಗುರಿಯಾಗಿಸಿ ಶಾಸಕ ಶರಣಗೌಡ ಕಂದಕೂರ ಅವರು ಆರೋಪ ಮಾಡಿರುವುದು ಖಂಡನೀಯವಾಗಿದೆ ಎಂದು ಜಿಲ್ಲಾ ಕೋಲಿ ಸಮಾಜದ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಗೋಸಿ ಅವರು ಆಕ್ರೋಶ ವ್ಯಕ್ತಪಡಿಸಿದರು.ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು.

ಕ್ಷೇತ್ರದಲ್ಲಿ ಭ್ರಷ್ಟಚಾರ ನಡೆದಿರುವ ಯಾವುದಾದರೂ ಪುರಾವೆಗಳು ಇದ್ದರೆ ಲೋಕಾಯುಕ್ತರಿಗೆ, ಸರಕಾರದ ಮೇಲಾಧಿಕಾರಿಗಳಿಗೆ, ಗೃಹ ಮಂತ್ರಿಯವರಿಗೆ ಅಥವಾ ರಾಜ್ಯಪಾಲರಿಗೆ ಕೊಡಬಹುದಾಗಿತ್ತು. ಆದರೆ ಶಾಸಕರು ತಮ್ಮ ಬಾಯಿ ಚಪಲಕ್ಕೆ ಅಧಿವೇಶನದಲ್ಲಿ ಈ ರೀತಿ ಮಾತನಾಡುವುದು ಸರಿಯಲ್ಲ. ಸಮಾಜದ ಅಧಿಕಾರಿಗಳ ಮೇಲೆ ದಬ್ಬಾಳಿಕೆ ಮುಂದುವರಿದರೆ ಸಮಾಜದ ಎಲ್ಲಾರೂ ಪಕ್ಷಾತೀತವಾಗಿ ನಿಮ್ಮ ವಿರುದ್ಧ ಕಚೇರಿ ಮುತ್ತಿಗೆ ಹಾಕಿ ಪ್ರತಿಭಟನೆ ಮಾಡಲು ಹಿಂಜರೆಯುದಿಲ್ಲ ಎಂದು ಪತ್ರಿಕಾ ಮುಖಾಂತರ ಎಚ್ಚರಿಕೆ ನೀಡುತ್ತಿದ್ದೇವೆ ಎಂದರು.

ಜಿಲ್ಲೆಯಲ್ಲಿ ಪೊಲೀಸ್ ಅಧಿಕಾರಿಗಳು ಅಕ್ರಮ ಮರಳು ಸಾಗಾಟ ತಡೆಯಲು ರಾಯಲ್ಟಿ ಇಲ್ಲದ ಟ್ರ್ಯಾಕ್ಟರ್ ಹಾಗೂ ಟಿಪ್ಪರ್ ಗಳನ್ನು ಜಪ್ತಿ ಮಾಡಿ ಕೇಸ್ ಗಳನ್ನು ದಾಖಲಿಸುತ್ತಿರುವುದು ಮತ್ತು ಸಾರ್ವಜನಿಕರಿಗೆ ಉತ್ತಮವಾಗಿ ಸ್ಪಂದನೆ ನೀಡುತ್ತಿರುವುದು ನಮಗೆಲ್ಲರಿಗೂ ಗೊತ್ತಿರುವ ಸಂಗತಿಯಾಗಿದೆ. ಇಂತಹ ನಿಷ್ಠಾವಂತ ಅಧಿಕಾರಿಗಳ ಮೇಲೆ ಆಪಾದನೆ ಮಾಡುತ್ತಿರುವುದು ಶಾಸಕರ ಘನತೆಗೆ ತಕ್ಕದಲ್ಲ, ನೀವು ಒಬ್ಬ ಅಸಮರ್ಥ ಶಾಸಕರು ಎಂದರು.ಶಾಸಕರಾದವರು ಹೆಚ್ಚಾಗಿ ಕ್ಷೇತ್ರದ ಅಭಿವೃದ್ಧಿಕಡೆ ಗಮನ ವಹಿಸಬೇಕೆ ಹೊರತು ಅಧಿಕಾರಿಗಳು ನಿಮಗೆ ಹಣ ವಸೂಲಿ ಮಾಡಿಕೊಡುತ್ತಿಲ್ಲ ಎನ್ನುವ ಕಾರಣಕ್ಕೆ ದೌರ್ಜನ್ಯ, ಬ್ಲ್ಯಾಕ್ ಮೇಲೆ ಮಾಡಿ ಇಲ್ಲಸಲ್ಲದ ಆರೋಪಗಳು ಮಾಡುವುದು ತಪ್ಪು ಎಂದರು. ಜಿಲ್ಲೆಯಲ್ಲಿರುವ ಪೊಲೀಸ್ ವರಿಷ್ಠಾಧಿಕಾರಿಗಳು ಹತಾಶೆ ಆಗಿದ್ದಾರೆ ಎಂದು ಸದನದಲ್ಲಿ ಹೇಳುವ ನೀವು ಒಬ್ಬ ಅಸಮರ್ಥ ಶಾಸಕ ಎಂದು ಸಾಬೀತು ಮಾಡಿದ್ದೀರಿ. ಅಧಿಕಾರಿಗಳು ಸರ್ಕಾರದ ನಿಯಮಗಳ ಅನುಸಾರ ಕೆಲಸ ಮಾಡಬೇಕಾಗುತ್ತದೆ. ಅವರು ಜಿಲ್ಲೆಯಲ್ಲಿ ಯಾವುದೇ ಅಹಿತಕರ ಘಟನೆ ಆಗದಂತೆ



ನೋಡಿಕೊಳ್ಳುತ್ತಿದ್ದಾರೆ ಎಂದರು.ನಮ್ಮ ಸಮಾಜದ ಬಂಧುಗಳ ಮತಗಳಿಂದ ಗೆದ್ದುಬಂದ ನೀವು ಸಮಾಜದ ಮೇಲೆ ದಬ್ಬಾಳಿಕೆ ಮಾಡುವುದು ಖಂಡನೀಯವಾಗಿದೆ. ಜೆಡಿಎಸ್ ಪಕ್ಷದ ರಾಜಾಧ್ಯಕ್ಷರಾದ ಬಡವರ ಬಂಧುಗಳಾದ ಮಾಜಿ ಮುಖ್ಯಮಂತ್ರಿ ಕುಮಾರಸ್ವಾಮಿಯವರು ಮುಂದಿನ ದಿನಗಳಲ್ಲಿ ಇಂತಹ ಒಬ್ಬ ಜಾತೀ ವಿರೋಧಿಗೆ ಟಿಕೆಟ್ ಕೊಡಬೇಕಾದರೆ ಯೋಚನೆ ಮಾಡಬೇಕು ಎಂದು ಹೇಳಬಯಸುತ್ತೇವೆ ಎಂದರು.

ಸಮಾಜದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭೀಮರೆಡ್ಡಿ ಯರಗೋಳ ಮಾತನಾಡಿ: ಶಾಸಕರು ಕ್ಷೇತ್ರದ ಜನರ ವಿಶ್ವಾಸ ಗಳಿಸುದರಲ್ಲಿ ಸಂಪೂರ್ಣ ವಿಫಲರಾಗುತ್ತಿದ್ದಾರೆ. ಸಣ್ಣ ಸಮುದಾಯ ವ್ಯಕ್ತಿಗಳು ಉನ್ನತ ದರ್ಜೆಗೆ ಹೋದರೆ ಶಾಸಕರಿಗೆ ಸಹಿಸೋಕೆ ಆಗುತ್ತಿಲ್ಲ. ಇವರಿಗೆ ಯಾಕೆ ಇಷ್ಟೊಂದು ಅಸೂಯೆ, ಸುಮಾರು ಹಳ್ಳಿಗಳಲ್ಲಿ ರಸ್ತೆಗಳಲ್ಲಿ ಅವುಗಳ ಅಭಿವೃದ್ಧಿ ಕಡೆ ಗಮನವಹಿಸಿ, ಸುಖಾಸುಮ್ಮನೆ ಅಧಿಕಾರಿಗಳ ಮೇಲೆ ಆರೋಪ ಮಾಡೋದು ವರ್ಗಾವಣೆ ಮಾಡಿಸೋದು ಸರಿಯಲ್ಲ, ಕಳೆದ ಅಧಿವೇಶನದಲ್ಲಿಯೂ ಸಭಾಪತಿಗಳು ಕೇವಲ ಪ್ರಚಾರದ ಹುಚ್ಚಿಗಾಗಿ ಮಾತನಾಡಬೇಡಿ ಎಂದು ಬುದ್ದಿವಾದ ಹೇಳಿದು ಶಾಸಕರು ಮರೆತಿದ್ದಾರೆ ಎಂದರು.

ಸಣ್ಣ ಹಣಮಂತ ಬಳಿಚಕ್ರ ಅವರು ಮಾತನಾಡಿ ಶಾಸಕರು ಕ್ಷೇತ್ರದಲ್ಲಿ ಭ್ರಷ್ಟಚಾರ ಮಾಡುವುದರಲ್ಲಿ ತಲ್ಲೀನರಾಗಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಸಮಾಜದ ಮುಖಂಡರಾದ ಬಸವರಾಜಪ್ಪ ಬಾಗ್ಲಿ, ಶರಣಪ್ಪ ಮೋಟ್ನಳ್ಳಿ ಹೂನಿಗೇರ, ಯುವ ಜಿಲ್ಲಾಧ್ಯಕ್ಷ ಮಲ್ಲು ಪೂಜಾರಿ, ವಡಿಗೇರಾ ತಾಲೂಕು ಅಧ್ಯಕ್ಷ ಬಸವರಾಜ್ ಕೋಲ್ಕರ್, ಮಾಜಿ ಎಪಿಎಂಸಿ ಅಧ್ಯಕ್ಷ ಅಯ್ಯಪ್ಪ ಹಾಲಿಗೇರ, ನಗರ ಗೌರವ ಅಧ್ಯಕ್ಷ ಮಾದೇವಪ್ಪ ಗಣಪುರ, ನಗರ ಅಧ್ಯಕ್ಷ ರಾಜಪ್ಪ, ಮಹೇಶ ಬಾಡಿಯಾಳ, ಲಕ್ಷ್ಮೀನಾರಾಯಣ ಪೂಜಾರಿ , ಶಿವಣ್ಣ ಬಳಚಕ್ರ, ಮುದಕಪ್ಪ ಚಾಮನಾಳ ಸೇರಿದಂತೆ ಇನ್ನಿತರು ಉಪಸ್ಥಿತರಿದ್ದರು

## ಪರಿಸರ ಮಾಲಿನ್ಯದಿಂದ ನೆಮ್ಮದಿಯ ಬದುಕು ದೂರ –ರಾಜೂರು




**ಬಳ್ಳಾರಿ ಡಿ,24:** ಜಾಗತಿಕ ಹವಾಮಾನದಲ್ಲಿ ಅನೇಕ ಬಗೆಯ ಏರುಪೇರುಗಳಾಗುತ್ತಿವೆ. ಹೆಚ್ಚುತ್ತಿರುವ ಉಷ್ಣತೆ, ಪರಿಸರ ಮಾಲಿನ್ಯದಿಂದಾಗಿ ನೆಮ್ಮದಿಯ ಬದುಕನ್ನು ಕಳೆದುಕೊಳ್ಳುತ್ತಿದ್ದೇವೆ ಎಂದು ವಿಶ್ರಾಂತ ಪ್ರಾಧ್ಯಾಪಕ ರಾಜೂರು ರಾಮಕೃಷ್ಣರೆಡ್ಡಿ ಅಭಿಪ್ರಾಯ ಪಟ್ಟರು.

ನಗರದ ಶ್ರೀಮತಿ ಸರಳಾದೇವಿ ಸತೀಶ್ಚಂದ್ರ ಅಗರವಾಲ್ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಭೌತಶಾಸ್ತ್ರ ವಿಭಾಗದ ವತಿಯಿಂದ ಆಯೋಜಿಸಿದ್ದ ' ಹವಾಮಾನ ಬದಲಾವಣೆ ಮತ್ತು ಪರಿಸರದ ಸುಸ್ಥಿರತೆ ' ರಾಷ್ಟಮಟ್ಟದ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದರು.

ಬದುಕಿನ ಮೂಲ ಶುದ್ಧ ಉಸಿರಾಟದ ಗಾಳಿ ನಮ್ಮಿಂದ ದೂರವಾಗುತ್ತಿದೆ. ನಮ್ಮ ಭೂಮಿಯಲ್ಲಿ ವ್ಯವಹಾರಿಕ ತಳಿ ಬೆಳೆಯುವುದನ್ನು ಕಡಿಮೆ ಮಾಡಿ ಆಹಾರದ ತಳಿಗಳ ಕಡೆ ಗಮನ ಹರಿಸಬೇಕಾಗಿದೆ. ನೆಲದ ಫಲವತ್ತತೆಯನ್ನು ಹೆಚ್ಚಿಸುವ ಸಸ್ಯ ಶ್ಯಾಮಲೆ, ಪರಿಸರ ಸುಸ್ಥಿರತೆಯ ಕಡೆ ನಾವು ತೀವ್ರವಾಗಿ ಹೆಜ್ಜೆಗಳನ್ನು ಇಡಬೇಕಿದೆ ಎಂದರು.

ಕಲುಷಿತ ಗಾಳಿಯನ್ನು ಸೇವಿಸುವುದರಿಂದ ಶ್ವಾಸಕೋಶ, ಚರ್ಮರೋಗ, ಅಸ್ತಮಾದಂತಹ ಕಾಯಿಲೆಗಳಿಗೆ ತುತ್ತಾಗಿ ತೊಂದರೆಗೆ ಒಳಗಾಗುತ್ತಿದ್ದೇವೆ. ಪ್ಲಾಸ್ಟಿಕ್ ವಸ್ತು, ವಾಹನಗಳ ಬಳಕೆ ಕಡಿಮೆ ಮಾಡಿ, ಅರಣ್ಯಗಳನ್ನು ಉಳಿಸಿಕೊಂಡರೆ ನೆಮ್ಮದಿಯ ಬದುಕು ಸಾಧ್ಯ ಎಂದು ವಿಶ್ಲೇಷಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಪ್ರಾಂಶುಪಾಲ ಡಾ. ಜಿ.ಪ್ರಹ್ಲಾದ ಚೌದ್ರಿ ಉತ್ತಮ ಪರಿಸರವನ್ನು ಕಾಪಾಡಿಕೊಳ್ಳುವ ಪ್ರಜ್ಞೆಯನ್ನು ವರ್ತಮಾನದಲ್ಲಿ ಬೆಳೆಸಿಕೊಳ್ಳಬೇಕು.ನಾಳಿನ ದಿನಗಳ ಬಗ್ಗೆ ಎಚ್ಚರವಿಲ್ಲದಿದ್ದರೆ ತುಂಬಾ ತೊಂದರೆಯನ್ನು ಅನುಭವಿಸಬೇಕಾಗುತ್ತದೆ ಎಂದರು.

ವೇದಿಕೆಯ ಮೇಲೆ ಸಂಶೋಧನಾ ವಿಜ್ಞಾನಿ ಡಾ.ಜಿ.ಬಾಲ ಕೃಷ್ಣ,ಭೌತಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಎಸ್ ಮಂಜುನಾಥ್, ರೂಸಾ ಸಂಚಾಲಕ ಡಾ.ಕುಂಚಂ ನರಸಿಂಹಲು ಇದ್ದರು. ಈ ಸಂದರ್ಭದಲ್ಲಿ ಪ್ರಾಧ್ಯಾಪಕರಾದ ದೊಡ್ಡ ಬಸವರಾಜ,ಪಂಚಾಕ್ಷರಿ, ಶಾಲಿನಿ, ಶಿಲ್ಪಾ ಕುಲಕರ್ಣಿ, ರಮಾಬಾಯಿ, ಗುರುಬಸಪ್ಪ, ದಸ್ತಗೀರಸಾಬ್ ದಿನ್ನಿ, ಶೋಭಾರಾಣಿ, ರೇಖಾ ಅಣ್ಣಿಗೇರಿ, ಗೀತಾ ಬಾಬುಸಿಂಗ್, ಗಾಯತ್ರಿ, ಚನ್ನಮ್ಮ ಕಣವಿ, ಶೋಭಾ ಎಚ್,ವಾಣಿ ಜಿ, ಕೀರ್ತಿ ಉಪಸ್ಥಿತರಿದ್ದರು

## ದೆಹಲಿಯಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಸಭೆ




**ಕಲಬುರಗಿ,ಡಿ.24:** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ನವದೆಹಲಿಯ ಕರ್ನಾಟಕ ಭವನದಲ್ಲಿ ಕಳೆದ 20 ವರ್ಷಗಳಿಂದ ಮನರೇಗಾ ರಚನೆ, ಅನುಷ್ಠಾನ ಮತ್ತು ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕೆಲಸ ಮಾಡಿದ ಎಲ್ಲಾ ಸಂಬಂಧಿತ ಪಾಲುದಾರರು ಮತ್ತು ತಜ್ಞರೊಂದಿಗೆ ನಡೆಸಿದ ದುಂಡು ಮೇಜಿನ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆಯನ್ನು ಕೇಂದ್ರ ಸರ್ಕಾರವು ಏಕಪಕ್ಷೀಯವಾಗಿ ರದ್ದುಗೊಳಿಸಿದ ನಂತರದ ಕೈಗೊಳ್ಳಬೇಕಿರುವ ಕ್ರಮಗಳ ಕುರಿತು, ದೇಶದಲ್ಲೇ ಮೊದಲ ಪ್ರಯತ್ನದಲ್ಲಿ, ಕರ್ನಾಟಕ ಸರ್ಕಾರವು ಈಗ ಈ ಉತ್ಪಾದಕ ಸಭೆಯ ಮೂಲಕ ಸ್ಥಳೀಯ ಆಡಳಿತ ಮತ್ತು ಬೇಡಿಕೆ ಆಧಾರಿತ ಜೀವನೋಪಾಯ ಮತ್ತು ಉದ್ಯೋಗದ ಹಕ್ಕನ್ನು ನಾಶಮಾಡುವ ಗುರಿಯನ್ನು ಹೊಂದಿರುವ ವಿಬಿ–ಜಿ ರಾಮ್ ಜಿ ಅನ್ನು ವಿರೋಧಿಸುವ ಪ್ರಕ್ರಿಯೆಯನ್ನು ರೂಪುಗೊಳಿಸಲು ಮಹತ್ವದ ಹೆಜ್ಜೆಯಿರಿಸಿದೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE